EMAIL : dairyadadaari@gmail.com ಸಂಪುಟ: 01 ಸಂಚಿಕೆ: 217

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 07-08-2026

## ಕೃತಕ ಬುದ್ಧಿ ಮತ್ತೆ ಹೆಚ್ಚಳ:ಆಂಥ್ರೋಪಿಕ್ ನಿಯೋಗದ ಜೊತೆ ಸಿಎಂ ಚರ್ಚೆ

**ಬೆಂಗಳೂರು, ಆ.6:** ಆಡಳಿತ, ಉನ್ನತ ಶಿಕ್ಷಣ, ಆರೋಗ್ಯ ರಕ್ಷಣೆ, ಸಂಶೋಧನೆ ಹಾಗೂ ರಾಜ್ಯದ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆಯ (ಎಐ) ಬಳಕೆ ಹೆಚ್ಚಿಸಲು ಸುದೀರ್ಘ ಸಹಭಾಗಿತ್ವ ಸಾಧಿಸುವ ಕುರಿತು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 'ಆಂಥ್ರೋಪಿಕ್' ಸಂಸ್ಥೆಯ ನಿಯೋಗದೊಂದಿಗೆ ಚರ್ಚೆ ನಡೆಸಿದರು.

ಕರ್ನಾಟಕದಲ್ಲಿ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಪ್ರಕ್ರಿಯೆಯಲ್ಲಿ ಜಾಗತಿಕ ಎಐ ನಾಯಕರನ್ನು ತೊಡಗಿಸಿಕೊಳ್ಳುವ ರಾಜ್ಯದ ಪ್ರಯತ್ನಗಳ ಭಾಗವಾಗಿ, ಐಟಿ ಬಿಟಿ ಸಚಿವರಾದ ಸಚಿವ ಪ್ರಿಯಾಂಕ್ ಖರ್ಗೆ ಅವರು ಆಂಥ್ರೋಪಿಕ್ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಇಂದು ಭೇಟಿ ಮಾಡಿದರು.



ಜವಾಬ್ದಾರಿಯುತ ಬಳಕೆ, ಡೇಟಾ ಗೌಪ್ಯತೆ ಮತ್ತು ಡೇಟಾ ಸಾರ್ವಭೌಮತ್ವವನ್ನು ಖಚಿತಪಡಿಸಿಕೊಳ್ಳುವ ಮೂಲಕ, ಸರ್ಕಾರ ಹಾಗೂ ಉದ್ಯಮಗಳಿಗಾಗಿ ಅನ್ವಯಿಕ ಎಐ ಪರಿಹಾರಗಳ "ಪ್ರಯೋಜನಕಾರಿ ಅಳವಡಿಕೆ"ಯ ಕುರಿತು ಈ ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಯಿತು. ಪ್ರಸ್ತಾವಿತ 'ಎಐ ವಿಶ್ವವಿದ್ಯಾಲಯ', ಬೃಹತ್ ಮಟ್ಟದ ಕೌಶಲ್ಯಾಭಿವೃದ್ಧಿ ಯೋಜನೆಗಳು ಮತ್ತು ಡೀಪ್-ಟೆಕ್ ಅನ್ವೇಷಣೆಗಳಿಗೆ ನೀಡುವ ಬೆಂಬಲವನ್ನು ಒಳಗೊಂಡಂತೆ ಸಮಗ್ರ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಕರ್ನಾಟಕದ ದೃಷ್ಟಿಕೋನವನ್ನು ಮುಖ್ಯಮಂತ್ರಿಗಳು ವಿವರಿಸಿದರು. ದೇಶದಲ್ಲೇ ಅತಿ ದೊಡ್ಡ ಎಐ ಪ್ರಮಾಣೀಕೃತ ಪ್ರತಿಭಾವಂತರನ್ನು ರೂಪಿಸಲು, ರಾಜ್ಯದ 'ನಿಪುಣ' ಕಾರ್ಯಕ್ರಮದಡಿ 'ಕ್ಲಾಡ್' ಸರ್ಟಿಫಿಕೇಶನ್ ಸೇರಿದಂತೆ ಎಐ-ಸಂಬಂಧಿತ ಸರ್ಟಿಫಿಕೇಶನ್ ಕೋರ್ಸ್‌ಗಳನ್ನು ಪರಿಚಯಿಸುವ ಬಗ್ಗೆ ಚರ್ಚಿಸಿದರು.

ಆರೋಗ್ಯ ರಕ್ಷಣೆ ಮತ್ತು ಲೈಫ್ ಸೈನ್ಸಸ್ ಕ್ಷೇತ್ರಗಳಲ್ಲಿ ಎಐ ಬಳಕೆ, ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಯ ಸಹಯೋಗದೊಂದಿಗೆ ವೈಜ್ಞಾನಿಕ ಸಂಶೋಧನೆಗಾಗಿ ಎಐ ಬಳಸುವ ಕುರಿತು ಚರ್ಚೆಗಳು ನಡೆದವು. ಉನ್ನತ ಶಿಕ್ಷಣದಲ್ಲಿ ಎಐ ಆಧಾರಿತ ಸಂಶೋಧನೆ ಮತ್ತು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಿಗೆ ಬೆಂಬಲ ನೀಡಲು ಆಂಥ್ರೋಪಿಕ್ ನಿಯೋಗವು ಆಸಕ್ತಿ ವ್ಯಕ್ತಪಡಿಸಿತು.

ಉದ್ಯಮಗಳಲ್ಲಿ ಎಐ ಅಳವಡಿಕೆ, ಡೇಟಾ ಸ್ಥಳೀಯತೆ ಮತ್ತು ಸಾರ್ವಭೌಮ ಸರ್ಕಾರಿ ಡೇಟಾವನ್ನು ರಾಜ್ಯದೊಳಗಿನ ಸರ್ವರ್‌ಗಳಲ್ಲೇ ಸಂಗ್ರಹಿಸುವುದನ್ನು ಖಚಿತಪಡಿಸಿಕೊಳ್ಳುವ ಬಗ್ಗೆಯೂ ಪ್ರಮುಖವಾಗಿ ಚರ್ಚಿಸಲಾಯಿತು. ರಾಜ್ಯ ಸರ್ಕಾರವು ತನ್ನ "ಸರ್ಕಾರಕ್ಕೆ ಮೊದಲ ಆದ್ಯತೆ" ನೀತಿಯನ್ನು ಪುನರುಚ್ಚರಿಸಿತು. ಎಐ ಆಧಾರಿತ ಸಾರ್ವಜನಿಕ ಪರಿಹಾರಗಳ ಅಭಿವೃದ್ಧಿಗೆ ಅನುಕೂಲವಾಗುವಂತೆ ಸರ್ಕಾರಿ ಡೇಟಾಸೆಟ್‌ಗಳನ್ನು ಸುರಕ್ಷಿತವಾಗಿಡುವ ಬಗ್ಗೆ ಚರ್ಚಿಸಿದರು. 2ನೇಪುಟಕ್ಕೆ

## ರಾಜ್ಯಕ್ಕೆ ಮಾದರಿಯಾಗುವಂತೆ ಗೌರಿ-ಗಣೇಶ ಹಬ್ಬ ಆಚರಿಸಿ: ಜಿಲ್ಲಾಧಿಕಾರಿ ಪೂವಿತಾ

ಧೈರ್ಯದ ದಾರಿ



**ರಾಯಚೂರು ಆಗಸ್ಟ್ 06:** ಜಿಲ್ಲೆಯಲ್ಲಿ ಗೌರಿ-ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದ ಯುತವಾಗಿ ರಾಜ್ಯಕ್ಕೆ ಮಾದರಿಯಾಗುವಂತೆ ಆಚರಿಸುವದರ ಜೊತೆಗೆ ಸಾರ್ವಜನಿಕರು ಜಿಲ್ಲಾಡಳಿತಕ್ಕೆ ಸಹಕಾರ ನೀಡುವ ಮೂಲಕ ಪ್ರತಿಯೊಬ್ಬರೂ ಈ ಹಬ್ಬವನ್ನು ಶಾಂತಿಯುತವಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಹೇಳಿದರು.

ಆಗಸ್ಟ್ 06ರ ಗುರುವಾರ ದಂದು ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗಣೇಶ ಹಬ್ಬದ ಪ್ರಯುಕ್ತ ನಡೆದ ಶಾಂತಿ ಪಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಿಒಪಿ ಹಾಗೂ ರಾಸಾಯನಿಕ ಮಿಶ್ರಿತ ಬಣ್ಣಗಳ ಮೂರ್ತಿಗಳನ್ನು ಪ್ರತಿಷ್ಠಾಪಿಸಬಾರದು. ಪರಿಸರ ಸ್ನೇಹಿ ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಮಾಡಬೇಕು. ಸರ್ಕಾರ ಹಾಗೂ ಜಿಲ್ಲಾಡಳಿತದ ಮಾರ್ಗಸೂಚಿಗಳನ್ನು ತಾವೆಲ್ಲರು ಪಾಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ರಾಯಚೂರು ಜಿಲ್ಲೆಯು ಭಾವೈಕ್ಯತೆಗೆ ಹೆಸರು ಪಡೆದಿದೆ. ಎಲ್ಲ ಸಮಾಜದವರು ಭಾವೈಕ್ಯದಿಂದ ಈ ಹಬ್ಬ ಆಚರಿಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಧ್ವನಿವರ್ಧಕಗಳನ್ನು ಬಳಸಬೇಕು. ಹಿರಿಯ ನಾಗರಿಕರು, ಮಕ್ಕಳು ಹಾಗೂ ಸಾರ್ವಜನಿಕರಿಗೆ ತೊಂದರೆಯಾಗದಂತೆ 2ನೇಪುಟಕ್ಕೆ

## ಬಿಎಸ್‌ಪಿ ಮುಖಂಡನ ಕೊಲೆ ಪ್ರಕರಣ : ಅಮಾಯಕರ ಹೆಸರನ್ನು ಎಫ್‌ಐಆರ್‌ನಿಂದ ಕೈಬಿಡಲು ವಾಲ್ಮೀಕಿ ನಾಯಕ ಸಂಘ ಆಗ್ರಹ



ಧೈರ್ಯದ ದಾರಿ

**ರಾಯಚೂರು –:** ದೇವದುರ್ಗ ತಾಲೂಕಿನ ಸುಂಕೇಶ್ವರಹಾಳ ಗ್ರಾಮದಲ್ಲಿ ನಡೆದ ಕೊಲೆ ಪ್ರಕರಣದಲ್ಲಿ ಅಮಾಯಕ ವ್ಯಕ್ತಿಗಳ ಹೆಸರನ್ನು ಆರೋಪಿಗಳ ಪಟ್ಟಿಗೆ ಸೇರಿಸಲಾಗಿದೆ ಎಂದು ಆರೋಪಿಸಿ, ಅವರ ಹೆಸರನ್ನು ಪ್ರಕರಣದಿಂದ ಕೈಬಿಡಬೇಕು ಎಂದು ಒತ್ತಾಯಿಸಿ ಹೈದರಾಬಾದ್ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಂಘದ ಪದಾಧಿಕಾರಿಗಳು ಗುರುವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಣಾಂಗ್ಶು ಗಿರಿ ಅವರಿಗೆ ಮನವಿ ಸಲ್ಲಿಸಿದರು.

ಸುಂಕೇಶ್ವರಹಾಳ ಗ್ರಾಮದಲ್ಲಿ ನಡೆದ ಯುವಕನ ಹತ್ಯೆ ಪ್ರಕರಣವನ್ನು ವಾಲ್ಮೀಕಿ ಸಮುದಾಯ ತೀವ್ರವಾಗಿ ಖಂಡಿಸಿದ್ದು, ಮೃತರ ಕುಟುಂಬದೊಂದಿಗೆ ಸಮಾಜ ನಿಲ್ಲಲಿದೆ. ಪ್ರಕರಣದಲ್ಲಿ ನಿಜವಾದ ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಕ್ಕೆ ಸಮುದಾಯದ ಯಾವುದೇ ವಿರೋಧವಿಲ್ಲ. ಆದರೆ, ಪ್ರಮುಖ ಆರೋಪಿತರ ಬಂಧನದ ಬಳಿಕ ಪ್ರಕರಣಕ್ಕೆ ಸಂಬಂಧವಿಲ್ಲದ ಐವರು ಅಮಾಯಕರ ಹೆಸರನ್ನು ಆರೋಪಿಗಳ ಪಟ್ಟಿಗೆ ಸೇರಿಸಲಾಗಿದೆ ಎಂದು ಆರೋಪಿಸಿದರು.

ಪ್ರಕರಣದ ಆರೋಪಿಗಳ ಪಟ್ಟಿಯಲ್ಲಿ ಎಂಟನೇ ಆರೋಪಿಯಾಗಿ ನಮೂದಾಗಿರುವ ಭೀಮರಾಯ ಹದ್ದಿನಾಳ ಅವರಿಗೆ ಪ್ರಕರಣದೊಂದಿಗೆ ಯಾವುದೇ ಸಂಬಂಧ ಇಲ್ಲ. ಅವರು ಹಲವು ವರ್ಷಗಳಿಂದ ರಾಯಚೂರಿನಲ್ಲಿ ವಾಸವಾಗಿದ್ದು, ಕಳೆದ 35 ವರ್ಷಗಳಿಂದ ಮಾಧ್ಯಮ ಕ್ಷೇತ್ರದಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ ಸಮಾಜದಲ್ಲಿ ಗೌರವ ಗಳಿಸಿದ್ದಾರೆ. ಅವರ ವಿರುದ್ಧ ದುರುದ್ದೇಶದಿಂದ ಹೆಸರು ಸೇರಿಸಲಾಗಿದೆ ಎಂದು ದೂರಿದರು.ಅಗತ್ಯವಿದ್ದರೆ ಸಿಡಿಆರ್, ಲೈವ್ ಲೊಕೇಷನ್ 2ನೇಪುಟಕ್ಕೆ

## ಉಪ ಕಾಲುವೆಗಳಿಗೆ ಅಳವಡಿಸಿರುವ ಅಕ್ರಮ ಪೈಪ್‌ಗಳನ್ನು ತೆರವುಗೊಳಿಸಿ: ರೈತ ಸಂಘದ ಆಗ್ರಹ


ಧೈರ್ಯದ ದಾರಿ



**ಮಾನ್ವಿ :** ತಾಲೂಕಿನ ರೈತರ ವಿವಿಧ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಘಟಕದ ವತಿಯಿಂದ ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರೆಡ್ಡಿ ಪಾಟೀಲ್ ಮಾತನಾಡಿ, ತಾಲೂಕಿನ ಗ್ರಾಮೀಣ ಭಾಗದಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಇಲ್ಲದ ಕಾರಣ ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ದೊರೆಯುತ್ತಿಲ್ಲ. ಇದರಿಂದ ಬೆಳೆಗಳಿಗೆ ನೀರುಣಿಸಲು ಸಾಧ್ಯವಾಗದೆ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಜೆಸ್ಕಾಂ ಇಲಾಖೆ ಅಧಿಕಾರಿಗಳು ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ರೈತರು ಮಾರಾಟ ಮಾಡಿದ ಜೋಳದ ಹಣವನ್ನು ತಕ್ಷಣವೇ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ತಾಲೂಕಿನ ಪಶು ಆಸ್ಪತ್ರೆಗಳಲ್ಲಿ ಖಾಲಿ ಇರುವ ಪಶುವೈದ್ಯರು ಹಾಗೂ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಶಾಲೆಗೆ ತೆರಳಲು ಅನುಕೂಲವಾಗುವಂತೆ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸಬೇಕು ಎಂದರು.ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್.ಎಸ್. ಮಠ ಮಾತನಾಡಿ, ತುಂಗಭದ್ರ ಎಡದಂಡೆ ಕಾಲುವೆ ವ್ಯಾಪ್ತಿಯ ಉಪ ಕಾಲುವೆಗಳಿಗೆ ಅಳವಡಿಸಿರುವ ಅಕ್ರಮ ಪೈಪ್‌ಗಳನ್ನು ಕೂಡಲೇ ತೆರವುಗೊಳಿಸಬೇಕು. ಕಾಲುವೆಗಳಲ್ಲಿನ ಸೀಲ್ಟ್ ತೆರವುಗೊಳಿಸಿ, ಸರ್ವಿಸ್ ರಸ್ತೆಗಳನ್ನು ದುರಸ್ತಿಪಡಿಸುವ ಮೂಲಕ ರೈತರಿಗೆ ನೀರಾವರಿ ವ್ಯವಸ್ಥೆ ಸುಗಮಗೊಳಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಬಸವರಾಜ ಮಾಲಿ ಪಾಟೀಲ್, ತಾಲೂಕು ಅಧ್ಯಕ್ಷ ಸಿದ್ದಯ್ಯಸ್ವಾಮಿ, ಅಮರೇಶ ಅಲ್ದಾಳ್, ಚಾಮರಸ ಜಾನೇಕಲ್, ತಾಲೂಕು ಕಾರ್ಯದರ್ಶಿ ಬಸವರಾಜ ತಡಕಲ್ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು

## 80ನೇ ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಿ: ತಹಶೀಲ್ದಾರ ಭೀಮರಾಯ ರಾಮಸಮುದ್ರ



ಧೈರ್ಯದ ದಾರಿ

**ಮಾನ್ವಿ:** ಆಗಸ್ಟ್ 15ರಂದು ನಡೆಯಲಿರುವ ದೇಶದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಡಗರ, ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ತಾಲೂಕು ಆಡಳಿತದಿಂದ ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ತಹಶೀಲ್ದಾರ ಭೀಮರಾಯ ರಾಮಸಮುದ್ರ, ಆಗಸ್ಟ್ 15ರಂದು ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳು, ರಾಷ್ಟ್ರೀಕೃತ ಹಾಗೂ ಖಾಸಗಿ ಬ್ಯಾಂಕ್‌ಗಳು, ಎನ್‌ಜಿಒಗಳು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಎಲ್ಲ ಸಾರ್ವಜನಿಕ ಸಂಸ್ಥೆಗಳಲ್ಲಿ ರಾಷ್ಟ್ರಧ್ವಜವನ್ನು ಧ್ವಜ ಸಂಹಿತೆಯ ನಿಯಮಾನುಸಾರ ಕಡ್ಡಾಯವಾಗಿ ಧ್ವಜಾರೋಹಣ ಮಾಡುವಂತೆ ಸೂಚಿಸಿದರು.

ಬೆಳಿಗ್ಗೆ 9 ಗಂಟೆಗೆ ತಹಶೀಲ್ದಾರ್ ಕಚೇರಿ ಆವರಣದಲ್ಲಿ ನಡೆಯುವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ತಾಲೂಕಿನ ಎಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಿಳಿಸಿದರು. ನಂತರ ತಾಲೂಕು ಕ್ರೀಡಾಂಗಣದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ ಅವರ ಉಪಸ್ಥಿತಿಯಲ್ಲಿ ನಡೆಯುವ ಸಾರ್ವಜನಿಕ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು. ತಾಲೂಕಿನ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳ 2ನೇ ಪುಟಕ್ಕೆ

## ಅನರ್ಹ ಶಿಕ್ಷಕರ ನೇಮಕ: ರಮೇಶ್ ಭಂಡಾರಿ ಕಿಡಿ



**ಸಿರವಾರ:** ತಾಲೂಕಿನ ಮಲ್ಲಟ ಗ್ರಾಮದ ವಸತಿ ನಿಲಯ ಶಾಲೆಯಲ್ಲಿ ನಿಯಮಗಳನ್ನು ಗಾಳಿಗೆ ತೂರಿ, ಬಿ.ಎಡ್ (B.Ed) ಪದವಿ ಪೂರ್ಣಗೊಳಿಸದ ಅಭ್ಯರ್ಥಿಯೊಬ್ಬರನ್ನು ಅತಿಥಿ ಶಿಕ್ಷಕರನ್ನಾಗಿ ನೇಮಕ ಮಾಡಿಕೊಳ್ಳುವ ಮೂಲಕ ಮುಖ್ಯೋಪಾಧ್ಯಾಯರು ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಗಂಭೀರ ಪ್ರಕರಣ ಬೆಳಕಿಗೆ ಬಂದಿದೆ ಎಂದು ರಮೇಶ್ ಭಂಡಾರಿ ತಿಳಿಸಿದ್ದಾರೆ.

ವಸತಿ ನಿಲಯ ಶಾಲೆಯಲ್ಲಿ ಬಿ.ಎಡ್ ಮುಗಿಯದ ಅಭ್ಯರ್ಥಿಯನ್ನು ನೇಮಕ ಮಾಡಿಕೊಂಡಿರುವುದರ ಬಗ್ಗೆ ಸಾರ್ವಜನಿಕರು ಮತ್ತು ಸ್ಥಳೀಯರು ಪ್ರಶ್ನಿಸಿದಾಗ, ಮುಖ್ಯೋಪಾಧ್ಯಾಯರು ಜವಾಬ್ದಾರಿಯುತ ಉತ್ತರ ನೀಡುವ ಬದಲು, "ಕ್ಷೇತ್ರ ಶಿಕ್ಷಣಾಧಿಕಾರಿಗಳೇ (BEO) ನೇಮಕಾತಿಗಾಗಿ ಅನುಮತಿ ಪತ್ರ ನೀಡಿದ್ದಾರೆ" ಎಂದು ಹಸಿಬಿಸಿ ಸುಳ್ಳು ಹೇಳಿ ನುಣುಚಿಕೊಳ್ಳಲು ಯತ್ನಿಸಿದ್ದಾರೆ. ಆದರೆ, ಈ ಕುರಿತು ಕ್ಷೇತ್ರ ಶಿಕ್ಷಣ ಇಲಾಖೆಯಿಂದ ಅಧಿಕೃತ ಮಾಹಿತಿ ಹಾಗೂ ಸ್ಪಷ್ಟನೆ ಕೋರಿದಾಗ ಅಸಲಿ ಸತ್ಯ ಹೊರಬಂದಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳು ಸ್ಪಷ್ಟಪಡಿಸಿರುವಂತೆ, "ನಾವು ಮಲ್ಲಟ ವಸತಿ ನಿಲಯದ ಶಾಲೆಯ ನೇಮಕಾತಿಗೆ ಯಾವುದೇ ರೀತಿಯ ಅನುಮತಿ ಪತ್ರವನ್ನಾಗಲಿ ಅಥವಾ ಆದೇಶ ಪತ್ರವನ್ನಾಗಲಿ ನೀಡಿಲ್ಲ" ಎಂದು ತಿಳಿಸಿ, ಮುಖ್ಯೋಪಾಧ್ಯಾಯರ ಮಾತು ಸಂಪೂರ್ಣ ಸುಳ್ಳು ಹಾಗೂ ನಿರಾಧಾರ ಎಂದು ಸಾಬೀತುಪಡಿಸಿದ್ದಾರೆ.

**ಅಧಿಕಾರ ದುರುಪಯೋಗ** 2ನೇಪುಟಕ್ಕೆ

ಮೊದಲನೇ ಪುಟದಿಂದ

# ಕೃತಕ ಬುದ್ಧಿ ಮತ್ತೆ ಹೆಚ್ಚಳ:ಆಂಥ್ರೋಪಿಕ್ ನಿಯೋಗದ ಜೊತೆ ಸಿಎಂ ಚರ್ಚೆ

ಇ–ಆಡಳಿತ, ಗೃಹ ಇಲಾಖೆ ಹಾಗೂ ಇತರ ಸರ್ಕಾರಿ ಸಂಸ್ಥೆಗಳಲ್ಲಿ ಎಐ ಅನ್ವಯಿಕೆಗಳನ್ನು ಗುರುತಿಸಲು ಇಲಾಖಾವಾರು ಕಾರ್ಯಪಡೆಗಳನ್ನು ರಚಿಸುವ ಕುರಿತೂ ಸಭೆಯಲ್ಲಿ ಪರಿಶೀಲಿಸಲಾಯಿತು. ಸೈಬರ್ ಬೆದರಿಕೆಗಳ ವಿರುದ್ಧದ ಸುರಕ್ಷತಾ ಕ್ರಮಗಳು, ನಾಗರಿಕರ ಡೇಟಾ ಮತ್ತು ಗೌಪ್ಯತೆಯ ರಕ್ಷಣೆ ಸೇರಿದಂತೆ ಜವಾಬ್ದಾರಿಯುತ ಎಐ ಪದ್ಧತಿಗಳನ್ನು ಭವಿಷ್ಯದ ಯೋಜನಾ ಅಳವಡಿಕೆಗಳ ಅಗತ್ಯ ಅಂಶಗಳಾಗಿ ಚರ್ಚಿಸಲಾಯಿತು.

ಸರ್ಕಾರಿ ವ್ಯವಸ್ಥೆಗಳಲ್ಲಿ ನಡೆಯುವ ವಂಚನೆಗಳನ್ನು ತಡೆಯಲು ಹಾಗೂ ವಿವಿಧ ಸರ್ಕಾರಿ ಸಂಸ್ಥೆಗಳು ಮತ್ತು ಶಿಕ್ಷಣ ಸಂಸ್ಥೆಗಳು ನಡೆಸುವ ಪರೀಕ್ಷೆಗಳ ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವಲ್ಲಿ ದಕ್ಷತೆ, ಭದ್ರತೆ ಮತ್ತು ಗೌಪ್ಯತೆಯನ್ನು ಹೆಚ್ಚಿಸಲು ಕೃತಕ ಬುದ್ಧಿಮತ್ತೆ ಹೇಗೆ ನೆರವಾಗುತ್ತದೆ ಎಂಬುದರ ಕುರಿತು ಮುಖ್ಯಮಂತ್ರಿಗಳು ಆಂಥ್ರೋಪಿಕ್‌ನ ತಾಂತ್ರಿಕ ಸಲಹೆ ಕೋರಿದರು.
ಎಐ ಶಿಕ್ಷಣ ಮತ್ತು ಸಂಶೋಧನೆಯನ್ನು ಬಲಪಡಿಸಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸೇರಿದಂತೆ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಆಂಥ್ರೋಪಿಕ್‌ನ 'ಕ್ಲಾಡ್ ಎಐ' ವೇದಿಕೆಯ ಲಭ್ಯತೆಗೆ ರಿಯಾಯಿತಿ/ಸಬ್ಸಿಡಿ ನೀಡುವಂತೆ ಮುಖ್ಯಮಂತ್ರಿಗಳು ಪ್ರಸ್ತಾಪಿಸಿದರು. 'ಸಿಎಂ 100 ದಿನಗಳ' ಮೈಲಿಗಲ್ಲನ್ನು ಈ ಸಹಯೋಗದೊಂದಿಗೆ ಸಾಧಿಸುವ ಕುರಿತೂ ಚರ್ಚಿಸಲಾಯಿತು.

ಕರ್ನಾಟಕದ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಗೆ ಬೆಂಬಲ ನೀಡಲು, ವಿಶೇಷವಾಗಿ ಡೀಪ್–ಟೆಕ್ ಕ್ಷೇತ್ರದಲ್ಲಿರುವ ರಾಜ್ಯದ 20,000 ಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳಿಗೆ ಆಂಥ್ರೋಪಿಕ್‌ನಿಂದ ಬೆಂಬಲ ವಿಸ್ತರಿಸುವ ಬಗ್ಗೆ ಪರಿಶೀಲಿಸಲಾಯಿತು. ತೆರಿಗೆ ಸಂಗ್ರಹಣೆ ಮತ್ತು ಸಾರ್ವಜನಿಕ ಸೇವಾ ವಿತರಣೆಯಂತಹ ಕ್ಷೇತ್ರಗಳಲ್ಲಿ ಎಐ ಅನ್ವಯಿಕೆಗಳನ್ನು ಪ್ರಾಯೋಗಿಕ ಯೋಜನೆಗಳಾಗಿ ಗುರುತಿಸಲಾಯಿತು.ಎಐ ತಂತ್ರಜ್ಞಾನಗಳನ್ನು ವಿಶಾಲವಾದ ಸಾಮಾಜಿಕ ಒಳಿತಿಗಾಗಿ ಬಳಸಲಾಗುತ್ತಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರೇತರ ಸಂಸ್ಥೆಗಳು ಮತ್ತು ಸಾರ್ವಜನಿಕ ಸಂಸ್ಥೆಗಳೊಂದಿಗಿನ ಸಹಭಾಗಿತ್ವದ ಕುರಿತೂ ಸಭೆಯು ಪರಿಶೀಲಿಸಿತು.

ಸಭೆಯಲ್ಲಿ ಹಿರಿಯ ಐಎಎಸ್ ಅಧಿಕಾರಿಗಳಾದ ಡಾ. ಮಂಜುಳಾ ಎನ್., ಮುನೀಶ್ ಮೌದ್ಗಿಲ್ ಹಾಗೂ ಸಿಎಂ ಹಣಕಾಸು ಸಲಹೆಗಾರ ಎಲ್. ಕೆ. ಅತೀಕ್, ಆಂಥ್ರೋಪಿಕ್ ಸಂಸ್ಥೆಯ ಪರವಾಗಿ ಅಂತಾರಾಷ್ಟ್ರೀಯ ನೀತಿ ವಿಭಾಗದ ಮುಖ್ಯಸ್ಥ ಮೈಕೆಲ್ ಸೆಲ್ಲಿಟ್ಟೋ, ಅಂತಾರಾಷ್ಟ್ರೀಯ ಮಾರುಕಟ್ಟೆಗಳ ವ್ಯವಸ್ಥಾಪಕ ನಿರ್ದೇಶಕ ಕ್ರಿಸ್ ಸಿಯೌರಿ, ಭಾರತದ ವ್ಯವಸ್ಥಾಪಕ ನಿರ್ದೇಶಕಿ ಐರಿನಾ ಘೋಷ್, ಭಾರತದ ನೀತಿ ವಿಭಾಗದ ಮುಖ್ಯಸ್ಥ ಆಮ್ಲಾನ್ ಮೊಹಾಂತಿ, ಮತ್ತು ಸಾರ್ವಜನಿಕ ವಲಯ, ಆರೋಗ್ಯ ಹಾಗೂ ಶಿಕ್ಷಣ ವಿಭಾಗದ ಗೋ–ಟು–ಮಾರ್ಕೆಟ್ ಉಸ್ತುವಾರಿ ಸಮರ್ಥ್ ಮಸ್ಸೋನ್ ಅವರು ಉಪಸ್ಥಿತರಿದ್ದರು.

## ಬಿಎಸ್‌ಪಿ ಮುಖಂಡನ ಕೊಲೆ ಪ್ರಕರಣ : ಅಮಾಯಕರ ಹೆಸರನ್ನು ಎಫ್‌ಐಆರ್‌ನಿಂದ ಕೈಬಿಡಲು ವಾಲ್ಮೀಕಿ ನಾಯಕ ಸಂಘ ಆಗ್ರಹ

ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಸತ್ಯಾಸತ್ಯತೆ ಖಚಿತಪಡಿಸಿಕೊಳ್ಳಬೇಕು. ಇದೇ ಪ್ರಕರಣದಲ್ಲಿ ಇನ್ನೂ ಹಲವು ನಿರಪರಾಧಿಗಳ ಹೆಸರನ್ನೂ ಸೇರಿಸಲಾಗಿದ್ದು, ಇದರಿಂದ ಅವರ ದೈನಂದಿನ ಜೀವನಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ತಿಳಿಸಿದರು.ಯಾರೋ ಮಾಡಿದ ತಪ್ಪಿಗೆ ಅಮಾಯಕರು ಶಿಕ್ಷೆಗೆ ಒಳಗಾಗಬಾರದು ಎಂಬುದು ಕಾನೂನಿನ ಮೂಲ ತತ್ವವಾಗಿದೆ. ಹೀಗಾಗಿ ನಿಜವಾದ ಆರೋಪಿಗಳನ್ನು ಹೊರತುಪಡಿಸಿ ದುರುದ್ದೇಶದಿಂದ ಸೇರಿಸಲಾದ ಎಲ್ಲ ಅಮಾಯಕರ ಹೆಸರನ್ನು ಎಫ್‌ಐಆರ್‌ನಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು.
ಇಲ್ಲದಿದ್ದರೆ ಈ ವಿಚಾರವು ಸಮುದಾಯಗಳ ನಡುವೆ ಅನಗತ್ಯ ಸಂಘರ್ಷಕ್ಕೆ ಕಾರಣವಾಗುವ ಸಾಧ್ಯತೆ ಇರುವುದರಿಂದ, ಪೊಲೀಸರು ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ನಿರಪರಾಧಿಗಳಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.
ಹೈದರಾಬಾದ್ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಂಘದ ವಿಭಾಗೀಯ ಕಾರ್ಯದರ್ಶಿ ಎನ್. ರಘುವೀರ ನಾಯಕ, ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ನಾಯಕ, ರಾಮುನಾಯಕ, ನಾರಾಯಣ ನಾಯಕ, ತಾಯಪ್ಪ ನಾಯಕ, ರಂಗಸ್ವಾಮಿ ನಾಯಕ, ಗೋಪಲ ನಾಯಕ ಉಪಸ್ಥಿತರಿದ್ದರು.

## 80ನೇ ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಿ: ತಹಶೀಲ್ದಾರ ಭೀಮರಾಯ ರಾಮಸಮುದ್ರ

ವಿದ್ಯಾರ್ಥಿಗಳು ಕ್ರೀಡಾಂಗಣದಲ್ಲಿ ನಡೆಯುವ ಪಥಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಶಿಕ್ಷಣ ಇಲಾಖೆಯ ಮೂಲಕ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.
ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ತಾಲೂಕಿನ ಗಣ್ಯರನ್ನು ತಾಲೂಕು ಆಡಳಿತದಿಂದ ಸಾರ್ವಜನಿಕ ಕಾರ್ಯಕ್ರಮದಲ್ಲಿ ಸನ್ಮಾನಿಸಲು ತೀರ್ಮಾನಿಸಲಾಯಿತು. ಮಳೆಗಾಲದ ವಾತಾವರಣವನ್ನು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸೂಕ್ತ ರೀತಿಯಲ್ಲಿ ಆಯೋಜಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಗ್ರೇಡ್–2 ತಹಶೀಲ್ದಾರ ಅಬ್ದುಲ್ ವಾಹಿದ್, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ತಾಲೂಕು ವೈದ್ಯಾಧಿಕಾರಿ ಡಾ. ಶರಣಬಸವ, ಪಿ.ಐ. ಸೋಮಶೇಖರ ಕೆಂಚರೆಡ್ಡಿ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ತಾಯಪ್ಪ ಬಿ. ಹೊಸೂರು, ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ತಡಕಲ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಅಧ್ಯಕ್ಷ ಶಿವಕುಮಾರ್ ಚಲ್ಮಲ್, ಬಸವರಾಜ ನಿಲೋಗಲ್, ಮಲ್ಲನಗೌಡ ಬೈಲ್ ಮರ್ಚೆಡ್, ಶೇಖ್ ಮುಸ್ತಫಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.


# ಅನರ್ಹ ಶಿಕ್ಷಕರ ನೇಮಕ: ರಮೇಶ್ ಭಂಡಾರಿ ಕಿಡಿ

**ಮತ್ತು ಬೇಡಿಕೆಗಳು:** ಇಲಾಖೆಯ ಹೆಸರನ್ನು ದುರುಪಯೋಗಪಡಿಸಿಕೊಂಡು, ಸುಳ್ಳು ಹೇಳಿಕೆ ನೀಡಿ ಹಾಗೂ ಉನ್ನತಾಧಿಕಾರಿಗಳ ಹೆಸರನ್ನು ಬಳಸಿ ಇಲಾಖೆಯನ್ನು ದಾರಿ ತಪ್ಪಿಸುತ್ತಿರುವ ಮಲ್ಲಟ ಗ್ರಾಮದ ಬಾಲಕಿಯರ ವಸತಿ ನಿಲಯದ ಮುಖ್ಯ ಗುರುವಿನ ಬೇಜವಾಬ್ದಾರಿ ವರ್ತನೆಗೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.
ನಿಯಮಗಳನ್ನು ಉಲ್ಲಂಘಿಸಿ, ಶಿಕ್ಷಣ ಇಲಾಖೆಯ ಹೆಸರಿಗೆ ಮಸಿ ಬಳಿದಿರುವ ಈ ಮುಖ್ಯೋಪಾಧ್ಯಾಯರನ್ನು ಕೂಡಲೇ ಸೇವೆಯಿಂದ ವಜಾಗೊಳಿಸಬೇಕು (ಅಮಾನತು ಮಾಡಬೇಕು) ಹಾಗೂ ಈ ಅಕ್ರಮ ನೇಮಕಾತಿ ಹಿಂದೆ ಇರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರಮೇಶ್ ಭಂಡಾರಿ ಒತ್ತಾಯಿಸಿದ್ದಾರೆ.

## ರಾಜ್ಯಕ್ಕೆ ಮಾದರಿಯಾಗುವಂತೆ ಗೌರಿ–ಗಣೇಶ ಹಬ್ಬ ಆಚರಿಸಿ: ಜಿಲ್ಲಾಧಿಕಾರಿ ಪೂವಿತಾ

ಗಣೇಶ ಮಂಡಳಿಗಳು ನಿಗಾವಹಿಸಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.
ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ರಸ್ತೆ ಮಧ್ಯೆ ಗಣೇಶನ ಪ್ರತಿಷ್ಠಾಪನೆ ಮಾಡಿದರೆ ರಸ್ತೆ ಸುಗಮ ಸಂಚಾರಕ್ಕೆ ತೊಂದರೆಯಾಗಲಿದೆ. ಹೀಗಾಗಿ ರಸ್ತೆ ನಡುವೆ ಗಣೇಶನನ್ನು ಕೂಡಿಸುವುದು ಬೇಡ. ಗಣೇಶನ ಪ್ರತಿಷ್ಠಾಪನೆಗೆ ಪೂರ್ವ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ ಎಂದು ಹೇಳಿದರು.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ ಅವರು ಮಾತನಾಡಿ, ಜಿಲ್ಲೆಯಲ್ಲಿ ನಿಗದಿತ ಎತ್ತರದ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಬೇಕು. ಗಣೇಶ ಮಂಡಳಿಯಿಂದ ಸ್ವಯಂ ಸೇವಕ ಇರಬೇಕು. ಹಿಂದೂ ಮುಸ್ಲಿಂ ಮಧ್ಯ ಯಾವುದೇ ರೀತಿಯಲ್ಲಿ ಗಲಾಟೆಯಾಗದಂತೆ ಪರಸ್ಪರ ಸಹೋದರತ್ವದಿಂದ ಈ ಹಬ್ಬ ಆಚರಿಸಬೇಕು. ಪರವಾನಿಗೆ ಇಲ್ಲದೇ ಪೋಸ್ಟರ್, ಬ್ಯಾನರ್ ಅವಳಡಿಸಬಾರದು. ಆಗ್ನಿ ಅವಘಡದ ಕುರಿತು ಎಚ್ಚರಿಕೆ ವಹಿಸಬೇಕು. ರಾಯಚೂರು ಜಿಲ್ಲೆಯಲ್ಲಿ ಡಿಜೆ ಸೌಂಡ್ ಅನ್ನು ಕಡಿಮೆ ಪ್ರಮಾಣದಲ್ಲಿ ಇಡಬೇಕು. ರಾತ್ರಿ 10ಗಂಟೆಯೊಳಗಾಗಿ ಗಣೇಶ ವಿಸರ್ಜನೆ ಮಾಡಬೇಕು. ಪತ್ರಿ ಗಣೇಶ ಮಂಡಳಿಯಲ್ಲಿ ಪ್ರಾಥಮಿಕ ಆರೋಗ್ಯ ರಕ್ಷಣೆ ಸಾಮಾಗ್ರಿಗಳನ್ನು ಕಡ್ಡಾಯವಾಗಿ ಇಡಬೇಕು ಎಂದರು.
ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ ಅವರು ಮಾತನಾಡಿ, ಪರಿಸರಕ್ಕೆ ಹಾನಿಯಾಗದಂತೆ ಗಣೇಶೋತ್ಸವ ಆಚರಣೆ ಮಾಡಬೇಕು. ಎಲ್ಲ ಜಿಲ್ಲೆಗಳಲ್ಲೂ ಪಿಒಪಿ ಗಣೇಶ ಮೂರ್ತಿ ಹಾಗೂ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ. ರಾಯಚೂರು ನಗರದ ಜನತೆ ಇದಕ್ಕೆ ಸಹಕಾರ ನೀಡಬೇಕು ಎಂದು ಕೋರಿದರು.
ಪ್ರಭಾರಿ ಪರಿಸರ ಸಂರಕ್ಷಣಾಧಿಕಾರಿ ಗಿರೀಶ್ ಅವರು ಮಾತನಾಡಿ, ಪಿಒಪಿ ಸೇರಿದಂತೆ ವಿವಿಧ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳ ಬಳಕೆಯಿಂದ ಕೆರೆ, ನದಿ ಹಾಗೂ ಇತರೆ ಜಲಮೂಲಗಳಲ್ಲಿ ನೀರಿನ ಗುಣಮಟ್ಟ ಕುಸಿಯುತ್ತಿರುವುದು ಹಾಗೂ ಜಲಚರ ಜೀವಿಗಳ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದು ಕಂಡುಬಂದಿದೆ. ಪಿಒಪಿ ಗಣೇಶ ಮೂರ್ತಿಗಳ ಸಂಗ್ರಹಣೆ, ಮಾರಾಟ, ವಿತರಣೆ ಹಾಗೂ ಸಾರ್ವಜನಿಕ ಪ್ರದರ್ಶನವನ್ನು ಅನುಮತಿಸಲಾಗುವುದಿಲ್ಲ. ಅಲ್ಲದೆ ವಿಷಕಾರಿ ಅಥವಾ ಭಾರ ಲೋಹಗಳನ್ನು ಒಳಗೊಂಡಿರುವ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಮೂರ್ತಿಗಳ ಉತ್ಪಾದನೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದರು.
ಈ ವೇಳೆ ಆಗ್ನಿ ಶಾಮಕದಳದ ಅಧಿಕಾರಿ ರವೀಂದ್ರ ಘಟಿಗಿ ಅವರು ಮಾತನಾಡಿ, ವಿವಿಧ ಗಣೇಶ ಮಂಡಳಿಯ ಮುಖಂಡರು ಆಗ್ನಿ ಅವಘಡದ ಕುರಿತು ಮುಂಜಾಗ್ರತಿ ವಹಿಸಬೇಕು. ಅಲ್ಲದೆ ಸರ್ಕಾರದ ಮಾರ್ಗಸೂಚಿಗಳನ್ನು ಚಾಚು ತಪ್ಪದೆ ಪಾಲಿಸಬೇಕು. ಪಿಒಪಿ ಗಣೇಶಗಳನ್ನು ಆದ್ಯತೆ ನೀಡಿದೆ. ಮಣ್ಣಿನ ಗಣೇಶ ಮೂರ್ತಿ ಸ್ಥಾಪನೆಗೆ ಆದ್ಯತೆ ನೀಡಬೇಕು ಎಂದರು.
ರಾಯಚೂರು ಮಹಾನಗರ ಪಾಲಿಕೆಯ ಜೋನಲ್ –01ರ ಆಯುಕ್ತ ಮಲ್ಲಿಕಾರ್ಜುನ ಅವರು ಮಾತನಾಡಿ, ವ್ಯಾಪಾರಿಗಳು ಪಿಒಪಿ ಗಣೇಶ ಮೂರ್ತಿಗಳನ್ನು ಮಾರಾಟ ಮಾಡಬಾರದು. ಎಲ್ಲರೂ ಮಣ್ಣಿನ ಗಣೇಶ ಮೂರ್ತಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಪಿಒಪಿ ಗಣೇಶ ಮೂರ್ತಿಗಳು ರಾಯಚೂರು ನಗರಕ್ಕೆ ಬರದಂತೆ ನೋಡಿಕೊಳ್ಳಲು ರಾಯಚೂರು ಸುತ್ತಲೂ ಪೊಲೀಸ್ ಇಲಾಖೆಯ ಅಧಿಕಾರಿಗಳು, ಪಾಲಿಕೆಯ ಅಧಿಕಾರಿಗಳು ನಿಗ ವಹಿಸಲಿದ್ದಾರೆ. ಈ ಬಾರಿ ರಾಯಚೂರಿನಲ್ಲಿ ಸಂಪೂರ್ಣವಾಗಿ ಪರಿಸರ ಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಿ ಆಚರಣೆ ಮಾಡೋಣ ಎಂದರು.
ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್.ಅವರು ಮಾತನಾಡಿ, ಎಲ್ಲಾ ಗಣೇಶ ಮಂಡಳಿಗಳು ಶುಚಿಯಾದ ನೀರು ಹಾಗೂ ಪ್ರಸಾದ್ ವನ್ನು ವಿತರಣೆ ಮಾಡಬೇಕು. ಹೆಚ್ಚಾಗಿ ಡ್ರೈ ಪ್ರಸಾದ್ ವಿತರಣೆಗೆ ಮಂಡಳಿಗಳು ಆದ್ಯತೆ ನೀಡಬೇಕು. ಆರೋಗ್ಯ ಇಲಾಖೆಯಿಂದ ಉಚಿತ ಆರೋಗ್ಯ ಸೇವೆ ಮಾಡಲಾಗಿದೆ. ಗಣೇಶ ಮಂಡಳಿಯವರು ಆರೋಗ್ಯ ಬಗ್ಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.
ಈ ವೇಳೆ ಗಣೇಶ ಮಂಡಳಿಯ ವಿವಿಧ ಸಂಘ, ಸಂಸ್ಥೆಯ ಮುಖಂಡರು, ಸಭೆಯಲ್ಲಿ ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.
ಇದೇ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ರಾಯಚೂರು ತಹಶಿಲ್ದಾರ್ ಸುರೇಶ ವರ್ಮಾ, ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಸಿಪಿಐ ಉಮೇಶ್ ಕಾಂಬಳೆ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪಲತಾ, ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ, ವಿವಿಧ ಸಮಾಜದ ಮುಖಂಡರು, ಗಜಾನನ ಮಂಡಳಿಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಎಸ್.ಐ.ಆರ್ ಕುರಿತು ಪ್ರಬಂಧ ಸ್ಪರ್ಧೆ ಕಾರ್ಯಕ್ರಮ




ಧೈರ್ಯದ ದಾರಿ

**ರಾಯಚೂರು:** ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕಾಲೇಜ್ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿತ್ತು. ಈ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟನೆ ಮಾಡಿ ಸ್ವೀಪ್ ಸಮಿತಿಯ ಹಾಗೂ ಎಸ್.ಐ.ಆರ್ ಕಾರ್ಯಕ್ರಮದ ನೋಡಲ್ ಅಧಿಕಾರಿಯದ ಡಾ. ದಂಡಪ್ಪ ಬಿರಾದಾರ ಮಾತನಾಡುತ್ತಾ , ಸ್ವೀಪ ಕಾರ್ಯಕ್ರಮಗಳಲ್ಲಿ ಈ ಕಾಲೇಜಿನ ವಿದ್ಯಾರ್ಥಿಗಳು ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸಿದ್ದಾರೆ. ವಿದ್ಯಾರ್ಥಿಗಳಲ್ಲಿ ಎಸ್.ಐ.ಆರ್ ವಿಶೇಷ ಸಮಗ್ರ ಪರಿಷ್ಕಣೆಯ ಕಾರ್ಯಕ್ರಮದ ಮಹತ್ವ ಅದರ ಹಿನ್ನೆಲೆಯನ್ನು ಪ್ರತಿಯೊಬ್ಬ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕೆಂಬ ಹಿನ್ನೆಲೆಯಲ್ಲಿ ಇಟ್ಟುಕೊಂಡು .ಕಾಲೇಜಿನ ವಿದ್ಯಾರ್ಥಿಗಳಾಗಿ ಪ್ರಬಂಧ ಸ್ಪರ್ಧೆ ಆಯೋಜನೆಯನ್ನು ಮಾಡಲಾಗಿದೆ. ವಿದ್ಯಾರ್ಥಿಗಳು ಅತ್ಯಂತ ಸಕ್ರಿಯವಾಗಿ ಆಸಕ್ತಿಯಿಂದ ಭಾಗವಹಿಸಿರಿ. ಈ ಕಾರ್ಯಕ್ರಮದ ಮೂಲಕ ತಮಗೆ ಚುನಾವಣೆ .ಮತದಾನ .ಮತ್ತು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಜೊತೆಗೆ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಉಳಿಸುವುದರ ಮಹತ್ವ ತಮಗೆ ಗೊತ್ತಾಗುತ್ತದೆ .ಪ್ರಬಂಧ ಬರೆಯುವ ವಿದ್ಯಾರ್ಥಿಗಳಿಗೆ ಎಲ್ಲರಿಗೂ ಒಳ್ಳೆಯದಾಗಲೆಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಡಾ. ಸುಗುಣ ಬಸವರಾಜ್ ಅವರು ಮಾತನಾಡುತ್ತಾ. ಸ್ವಿಫ್ ಕಾರ್ಯಕ್ರಮದಲ್ಲಿ ಜಿಲ್ಲಾ ಆಡಳಿತದೊಂದಿಗೆ ನಮ್ಮ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಕ್ರಿಯಾಶೀಲರಾಗಿ ಕಾರ್ಯವನ್ನು ನಿರ್ವಹಿಸುತ್ತಾರೆ. ನಮ್ಮ ಕಾಲೇಜಿನ ಉಪನ್ಯಾಸಕರಾದ ಡಾ.ಸಂತೋಷ್ ರೇವೂರವರು ಈ ಕಾರ್ಯಕ್ರಮ ಆಯೋಜನೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ .ವಿದ್ಯಾರ್ಥಿಗಳಲ್ಲಿ ಎಸ್‌ಐಆರ್ ಕಾರ್ಯಕ್ರಮ ಜಾಗೃತಿ ಮೂಡಿಸಲು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆ ಹಲವಾರುಕಾರ್ಯಕ್ರಮಗಳನ್ನು ಮಾಡುತ್ತಿದೆ. ಯುವತಿಯರಾದ ನೀವು ಇಂಥ ವಿಷಯದ ಕುರಿತು ಹೆಚ್ಚು ಆಸಕ್ತಿಯನ್ನು ಮೂಡಿಸಿಕೊಳ್ಳಬೇಕು. ನಿಮ್ಮಲ್ಲಿನ ಯಾರಾದ್ರೂ 18 ವರ್ಷ ಪೂರ್ಣಗೊಳಿಸಿದವರು ಸಹ ಮತದಾರ ಪಟ್ಟಿಯಲ್ಲಿ ಹೆಸರನ್ನು ತಪ್ಪದೇ ಸೇರಿಸಬೇಕೆಂದು ಹೇಳಿದರು. ಕಾರ್ಯಕ್ರಮ ಕುರಿತು ಕಾಲೇಜಿನ ಉಪನ್ಯಾಸಕರಾದ ಡಾ. ಸಂತೋಷ್ ರೆವೂರವರ ಪ್ರಾಸ್ತಾವಿಕವಾಗಿ ಮಾತನಾಡುತ್ತಾ .ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪ್ರತಿಯೊಂದು ನಗರದ ಪ್ರಮುಖ ಇಲಾಖೆಗಳಲ್ಲಿ ರಂಗೋಲಿ ಹಾಕುವುದರ ಮೂಲಕ ನಮ್ಮ ಕಾಲೇಜಿನ ಎನ್‌ಎಸ್‌ಎಸ್ ಹಾಗು ಇತರ ವಿದ್ಯಾರ್ಥಿಗಳು ಸಕ್ರಿಯವಾಗಿ ಕಾರ್ಯವನ್ನು ನಿರ್ವಹಿಸಿದರು. ಇದಕ್ಕೆ ಜಿಲ್ಲಾಡಳಿತದವರು ಮೆಚ್ಚುಗೆಯ ವ್ಯಕ್ತಪಡಿಸಿದ್ದಾರೆ. ಈ ಒಂದು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಬಹಳ ಆಸಕ್ತಿಯಿಂದ ಬರೆಯಿರಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆಯನ್ನು ನೀಡಲಾಗುವುದು ಎಂದು ಹೇಳಿದರು. ಕಾಲೇಜಿನ ಎನ್‌ಎಸ್‌ಎಸ್‌ಹಾಗೂ ಇ ಎಲ್ ಸಿ ಕ್ಲಬ್ ನ ವಿದ್ಯಾರ್ಥಿಗಳು ಕಾರ್ಯಕ್ರಮ ಆಯೋಜನೆ ಮಾಡುವಲ್ಲಿ ಸಹಕರಿಸಿದರು. ಈ ಸಂದರ್ಭದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಯುವಸೌರಭ–2026 ಶಿಕ್ಷಣಾರ್ಥಿಗಳಿಗೆ ನಾಡು–ನುಡಿ ಸಂಸ್ಕೃತಿಯ ಮಹಿಮೆ ತಿಳಿಸಿದ ನಿರ್ದೇಶಕಿ ಉತ್ತರಿದೇವಿ

ಧೈರ್ಯದ ದಾರಿ

**ಮಾನ್ವಿ :**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಹಾಗೂ ಶಾರದಾ ವಿದ್ಯಾನಿಕೇತನ ಶಿಕ್ಷಣ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳಿಗಾಗಿ ಯುವ ಸೌರಭ–2026 ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರವುವನ್ನು ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗಿತ್ತು.
ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದಉತ್ತರಿದೇವಿ ಉದ್ಘಾಟಿಸಿ ಮಾತನಾಡಿದರು. ಅವರು ಮಾತನಾಡಿ ನಮ್ಮ ಕನ್ನಡ ನಾಡು–ನುಡಿಯಲ್ಲಿರುವ ಶ್ರೀಮಂತ ಸಂಸ್ಕೃತಿ ಹಾಗೂ ಸಂಗೀತದ ಮಹಿಮೆಯನ್ನು ಪ್ರಶಿಕ್ಷಣಾರ್ಥಿಗಳು ಅರ್ಥ ಮಾಡಿಕೊಳ್ಳಬೇಕು. ಹಲವು ಸಾಂಸ್ಕೃತಿಕ ವೈಭವವನ್ನು ಹೊಂದಿರುವ ಈ ನಾಡನ್ನು ಪ್ರೀತಿಸುವುದರ ಜೊತೆಗೆ ಈಗ ಶಿಕ್ಷಕರಾಗಲು ತಯಾರಾಗುತ್ತಿರುವ ನೀವುಗಳು ಮುಂದೆ ಕಲಿಸಲು ಹೋಗುವ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ವೈಭವದ ಬಗ್ಗೆ ತಿಳಿಸಬೇಕು. ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ಬೆಳೆಸುವಲ್ಲಿ ನೀವು ಪ್ರಮುಖ ಪಾತ್ರ ವಹಿಸಬೇಕು ಎಂದು ಕರೆ ನೀಡಿದರು.
ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಾರದಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಹೈಂಧವಿ ಮಧುಸೂದನ್ ಗುಪ್ತಾಜೀ ಅವರು ಮಾತನಾಡಿ ನಮ್ಮ ಕನ್ನಡ ನಾಡಿನ ವೈಭವವನ್ನು ತೋರಿಸುವ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ಪ್ರದರ್ಶಿಸುತ್ತಿರುವ ಎಲ್ಲಾ ಕಲಾತಂಡಗಳಿಗೆ ಅಭಿನಂದನೆಗಳು. ನೀವು ಬೋಧಿಸಲು ಹೋಗುವ ವಿದ್ಯಾರ್ಥಿಗಳಿಗೂ ನಮ್ಮ ನಾಡಿನ ವಿಶೇಷತೆ ಪರಂಪರೆಯ ಬಗ್ಗೆ ತಿಳಿಸುವ ಜವಾಬ್ದಾರಿ ನಿಮ್ಮ ಮೇಲಿದೆ ಎಂದು ಹೇಳಿದರು.
ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ. ಪರಮೇಶ್ವರಪ್ಪ ಗೋಪಶೆಟ್ಟಿ ಉಪ ಪ್ರಾಚಾರ್ಯರಾದ ವೀರಭದ್ರಯ್ಯ ಹಿರೇಮಠ ಸಂಗೀತ ಉಪನ್ಯಾಸಕರಾದ ಅಮರೇಶ ಸಾಲಿಮಠ ಮಹಾಂತಗೌಡ ಹಾಗೂ ಇತರ ಉಪನ್ಯಾಸಕರು ಉಪಸ್ಥಿತರಿದ್ದರು.
ಕಾರ್ಯಕ್ರಮದಲ್ಲಿ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ಹಲವು ಕಲಾತಂಡಗಳು ನೃತ್ಯ ಸಂಗೀತ ನಾಟಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿ ಸಭಿಕರ ಮನಗೆದ್ದರು.
ಕಾರ್ಯಕ್ರಮವು ರಾಷ್ಟ್ರೀಯ ಭಾವೈಕ್ಯತೆ ಮತ್ತು ಸಾಂಸ್ಕೃತಿಕ ಪ್ರಜ್ಞೆಯನ್ನು ಬೆಳೆಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅತಿಥಿಗಳು ಶ್ಲಾಘಿಸಿದರು.






# ವಿಶ್ವ ಸ್ತನ್ಯಪಾನ ಸಪ್ತಾಹ



**ಗದಗ,ಆ.6:** ತಾಯಿಯ ಎದೆ ಹಾಲು ಮಗುವಿಗೆ ಅಮೃತವಿದ್ದಂತೆ ಮಗು ಬಯಸಿದಾಗಲೆಲ್ಲ ನೀಡಬಹುದಾಗಿದೆ ಯಾವುದೇ ಸಿದ್ಧತೆ ಬೇಕಾಗಿಲ್ಲ ಇದು ಮಗುವಿಗಾಗಿ ಸಿದ್ಧಪಡಿಸಿದ ಆಹಾರವಾಗಿದೆ ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್ ಡಿ ಬೆನ್ನೂರ ಹೇಳಿದರು.

ಅವರು ಗದಗ ತಾಲೂಕಿನ ಹೊಂಬಳ ಗ್ರಾಮದ 9ನೇ ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ಆಯೋಜಿಸಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು

ಸುಸ್ಥಿರ ಜೀವನದ ಭದ್ರ ಅಡಿಪಾಯಕ್ಕಾಗಿ ಸ್ತನ್ಯಪಾನ ಪರಿಣಾಮಕಾರಿ ವಿಧಾನಗಳನ್ನು ಸದೃಢಗೊಳಿಸೋಣ ಎಂಬ ಈ ವರ್ಷದ ಧ್ಯೇಯವಾಕ್ಯದೊಂದಿಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಆಚರಿಸಲಾಗುತ್ತಿದೆ ಈ ಧ್ಯೇಯ ವಾಕ್ಯವು ಮಗುವಿನ ಜನನದ ಒಂದು ಗಂಟೆಯೊಳಗೆ ಸ್ಕನ್ಯಪಾನ ಪ್ರಾರಂಭಿಸುವುದು ಹಾಗೂ ಜೀವನದ ಮೊದಲ ಆರು ತಿಂಗಳವರೆಗೆ ಕೇವಲ ತಾಯಿಯ ಹಾಲನ್ನೇ ನೀಡುವ ಪದ್ಧತಿಗಳನ್ನು ಮತ್ತಷ್ಟು ಬಲಪಡಿಸುವ ಮಹತ್ವವನ್ನು ಒತ್ತಿ ಹೇಳುತ್ತಿವೆ ಈ ಪರಿಣಾಮಕಾರಿ ಕ್ರಮಗಳು ಪ್ರತಿಯೊಂದೂ ಮಗುವಿನ ಆರೋಗ್ಯಕರ ಬೆಳವಣಿಗೆ, ಉತ್ತಮ ಪೌಷ್ಟಿಕತೆ ಮತ್ತು ರೋಗ ನಿರೋಧಕ ಶಕ್ತಿಗೆ ಸಹಕಾರಿಯಾಗುವದರ ಜೊತೆಗೆ ಮಗುವಿನ ಜೀವನಕ್ಕೆ ಉತ್ತಮ ಹಾಗೂ ಸುಸ್ಥಿರ ಆರಂಭವನ್ನು ಒದಗಿಸಲು ಭದ್ರ ಅಡಿಪಾಯವಾಗುತ್ತದೆ

ತಾಯಿಯ ಎದೆ ಹಾಲಿನೊಂದಿಗೆ ಮಗುವಿಗೆ ಆತ್ಮಸ್ಥೈರ್ಯ,ದೃಢ ಮನಸ್ಸು,ಮನೋಬಲ, ತೋಳ್ಬಲ ಹಾಗೂ ತಾಯಿ ಬಗ್ಗೆ ಗೌರವದ ಭಾವನೆ ಬೆಳೆಯುತ್ತದೆ ಹಾಗಾಗಿ ಹೆರಿಗೆಯಾದ ಒಂದು ಗಂಟೆ ಒಳಗಾಗಿ ಮಗುವಿಗೆ ಎದೆಹಾಲು ಉಣ್ಣಿಸಬೇಕು ಆರು ತಿಂಗಳವರೆಗೆ ಎದೆ ಹಾಲು ಬಿಟ್ಟು ಬೇರೆ ಏನನ್ನು ಕೊಡಬಾರದು ಆರು ತಿಂಗಳ ನಂತರ ಪೂರಕ ಆಹಾರದ ಜೊತೆ ತಾಯಿ ಎದೆಹಾಲು ಮುಂದುವರೆಸಬೇಕು ಮಗು ಎರಡು ವರ್ಷ ಪೂರ್ಣಗೊಳ್ಳುವವರೆಗೆ ತಪ್ಪದೇ ಮಗುವಿಗೆ ಎದೆ ಹಾಲನ್ನು ನೀಡಬೇಕು ನವಜಾತ

ಶಿಶುವಿನ ಬದುಕುಳಿಯುವಿಕೆ ಮಾತ್ರವಲ್ಲದೆ ಅತ್ಯುತ್ತಮ ಬೆಳವಣಿಗೆ,ಸೋಂಕುಗಳ ವಿರುದ್ಧ ವರ್ಧಿತ ರೋಗ ನಿರೋಧಕ ಶಕ್ತಿ ಮತ್ತು ನಂತರದ ಜೀವನದಲ್ಲಿ ಅಸಾಂಕ್ರಾಮಿಕ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡಲು ಸ್ತನ್ಯಪಾನವು ಅತ್ಯಂತ ಪರಿಣಾಮಕಾರಿ ಯಾಗಲಿದೆ ಎಂದರು

ನಂತರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್ ಎಫ್ ನಾರ್ಶಿ ಮಾತನಾಡಿ ಆರೋಗ್ಯವಂತ ತಾಯಿ ಇದ್ದರೆ ಆರೋಗ್ಯವಂತ ಮಗು ಪಡೆಯಲು ಸಾಧ್ಯ ಹಾಗಾಗಿ ಗರ್ಭಿಣಿ ಇದ್ದಾಗ ನಿಗದಿತ ಅವಧಿಯಲ್ಲಿ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದರು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಅನಿಸಾ ಹೆಚ್ ವಾಯ್ ಮಗುವಿಗೆ ಹಾಲುಣಿಸುವ ಸರಿಯಾದ ಭಂಗಿ ಕುರಿತು ಪ್ರಾತ್ಯಕ್ಷಿಕೆಯೊಂದಿಗೆ ತಾಯಂದಿರರಿಗೆ ವಿವರಿಸಿದರು

ಸದರಿ ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ ಆರ್ ಎಸ್ ಹನಸಿ,ಆಶಾ ಕಾರ್ಯಕರ್ತೆ ಕೆ ಟಿ ಕೇಮಾವಿ, ಬಿ ಡಿ ಕಾವೇರಿ ಹಾಗೂ ಗರ್ಭಿಣಿಯರು, ಬಾಣಂತಿಯರು,ಮಕ್ಕಳ ತಾಯಂದಿರರು ಉಪಸ್ಥಿತರಿದ್ದರು

# ಎರಡು ದಿನದಲ್ಲಿ ಬೆಳೆಹಾನಿ ಸಮಗ್ರ ವಿವರ ಸಲ್ಲಿಸಿ



**ಗುಳೇದಗುಡ್ಡ,ಆ.6:** ಬಾಗಲಕೋಟೆ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸುವ ಕುರಿತು ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಿ, ರೈತರಿಗೆ ನ್ಯಾಯಸಮ್ಮತ ಪರಿಹಾರ, ಬೆಳೆಹಾನಿ ಪರಿಹಾರ ಧನ, ಅಗತ್ಯ ಪರಿಹಾರ ಪ್ಯಾಕೇಜ್ ಹಾಗೂ ಇತರೆ ಸರ್ಕಾರದ ಸೌಲಭ್ಯಗಳನ್ನು ಶೀಘ್ರದಲ್ಲಿ ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ವಿಜಯಾನಂದ ಕಾಶಪ್ಪನವರ ಹೇಳಿದರು.

ಮಳೆಕೊರತೆಯಿಂದಾಗಿ ಬಾಡುತ್ತಿರುವ ಬೆಳೆಗಳನ್ನು ವೀಕ್ಷಿಸಲು ಅವರು ಸಮೀಪದ ಬೂದಿನಗಡ ಗ್ರಾಮದ ಜಮೀನಿಗೆ ಭೇಟಿ ನೀಡಿ ಮಾತನಾಡಿ, ಬೆಳೆನಷ್ಟದಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ನಮಗೆ ತಂಡ ಮಾಡಿ ಕಳಿಸಿದ್ದಾರೆ. ಜಿಲ್ಲೆಯ ಎಲ್ಲ ಪ್ರದೇಶಗಳಿಗೆ ಭೇಟಿ ನೀಡಿ ಬೆಳೆಹಾನಿಯಾಗಿರುವ ಬಗ್ಗೆ ಸರಿಯಾದ ವರದಿಯನ್ನು ಎರಡು ದಿನಗಳಲ್ಲಿ ಸಲ್ಲಿಸುವಂತೆ ಹಾಗೂ ಸ್ಥಳೀಯ ಶಾಸಕರಿಂದ ಮಾಹಿತಿ ಪಡೆಯುವಂತೆ ಕೃಷಿ ಅಧಿಕಾರಿಗಳಿಗೆ ಸಚಿವ ಕಾಶಪ್ಪನವರ ಸೂಚನೆ ನೀಡಿದ ಅವರು ಈ ಬಗ್ಗೆ ಹೆಚ್ಚಿನ ಕಾಳಜಿವಹಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಅಲ್ಪ ಮಳೆಯ ಪರಿಣಾಮವಾಗಿ ಬೆಳೆಗಳು ಒಣಗಿರುವುದು, ಬೆಳೆ ಇಳುವರಿ ಕುಸಿತ, ನೀರಿನ ಅಭಾವ ಹಾಗೂ ರೈತರು ಎದುರಿಸುತ್ತಿರುವ ಸಂಕಗಳನ್ನು, ರೈತರ ಅಹವಾಲುಗಳನ್ನು ಆಲಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಭೀಮಸೇನ ಚಿಮ್ಮನಕಟ್ಟಿ, ಉಮೇಶ ಮೇಟಿ, ಜಿಲ್ಲಾಧಿಕಾರಿ ಎಂ, ಸಂಗಪ್ಪ, ಜಿಪಂ ಸಿಒ ಗಜಾನನ ಬಾಲೆ, ತಾಪಂ ಇಒ ಸತೀಶ ಮಾಕೊಂಡ, ತಹಶೀಲ್ದಾರ ಎಸ್.ಎಫ್. ಬೊಮ್ಮಣ್ಣವರ, ಜಿಲ್ಲಾಕೃಷಿ ನಿರ್ದೇಶಕ ಟಿ. ರುದ್ರಪ್ಪ, ಕೃಷಿ ಅಧಿಕಾರಿ ಆನಂದ ಗೌಡರ, ನಾಗರಾಜ ಹದ್ಲಿ, ಸಂಜಯ ಬರಗುಂಡಿ, ಫಕೀರಪ್ಪ ತಳವಾರ, ರಾಜು ಸಂಗಮ, ಸಮೀರ ಡಾಲಾಯತ, ಸಲೀಮ ಇಲಕಲ್ಲ, ಸಲೀಮ ಮೊಮಿನ, ರಜಾಕ ಕುದರಿ, ಬಾಬು ಬೊಂಬಲೇಕರ, ಮೂಕಪ್ಪ ಹೂನೂರ, ಮುಬಾರಕ ಮಂಗಳೂರು, ಗ್ರಾಮಸ್ಥರಾದ ಮಲ್ಲಪ್ಪ ವಾಲೀಕಾರ, ನರಿಯಪ್ಪ ಉಳ್ಳಾಗಡ್ಡಿ, ಲೆಂಕ್ಕಪ್ಪ ಹಿರೇಕುರುಬರ, ತಿಪ್ಪಣ್ಣ ಗೌಡರ, ಸಂತೋಷ ಕುರಹಟ್ಟಿ ಮತ್ತಿತರರು ಇದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ 6360866626**

# ಹೆಚ್. ಎಸ್.ಮಹದೇವಪ್ರಸಾದ್ ಜನಪರ ಕೆಲಸ ಶಾಶ್ವತ: ಗಣೇಶ್ ಪ್ರಸಾದ್



**ಚಾಮರಾಜನಗರ, ಆ.06–** ಮಾಜಿ ಸಚಿವ ದಿವಗಂತ ಹೆಚ್.ಎಸ್. ಮಹದೇವ ಪ್ರಸಾದ್ ಅವರು ಮಾಡಿರುವ ಜನಪರ ಕೆಲಸಗಳು ಕ್ಷೇತ್ರ ಮತ್ತು ಜಿಲ್ಲೆಯಲ್ಲಿ ಶಾಶ್ವತವಾಗಿ ಉಳಿದಿದೆ ಎಂದು ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಹೇಳಿದರು. ಡಿಜಿಟಲ್ಪತ್ರಿಕೆ

ತಾಲೂಕಿನ ಹರವೆ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಮಾಜಿ ಸಚಿವ ದಿವಂಗತ ಹೆಚ್.ಎಸ್.ಮಹದೇವಪ್ರಸಾದ್ ಅವರ 68ನೇ ಜನ್ಮ ದಿನದ ಪ್ರಯುಕ್ತ ಅಭಿಮಾನಿ ಬಳಗ, ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಸರ್ಕಾರಿ ಆಸ್ಪತ್ರೆ ವೈದ್ಯರು, ಸಿಬ್ಬಂದಿ ವರ್ಗ ಹಾಗೂ ಅರವಿಂದ ಕಣ್ಣಾಸ್ಪತ್ರೆ ಕೊಯಮತ್ತೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಕಣ್ಣಿನ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎಚ್.ಎಸ್. ಮಹದೇವಪ್ರಸಾದ್ ಅವರು ರಾಜಕಾರಣ ಮತ್ತು ಜನಸೇವೆಗೆ ಹೆಚ್ಚು ಪ್ರಚಲಿತವಾಗಿದ್ದು, ಅವರು 2 ಬಾರಿ ಸಚಿವರು, 5 ಬಾರಿ ಶಾಸಕರಾಗಿ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ ಅವರು ಅನುಷ್ಠಾನ ಮಾಡಿದ ಯೋಜನೆಗಳು ಜಿಲ್ಲೆಯ ಅಭಿವೃದ್ಧಿ ಪೂರಕವಾಗಿದೆ ಎಂದರು.

ನಮ್ಮ ತಂದೆ ಮಹದೇವಪ್ರಸಾದ್ ಜೊತೆ ದಿವಗಂತ ಮಾಜಿ ಸಂಸದ ಆರ್.ಧ್ರುವನಾರಾಯಣ್ ಅವರು ಜೊತೆಗೂಡಿ ಜಿಲ್ಲೆಯ ಅಭಿವೃದ್ಧಿಗೆ ಒತ್ತು ನೀಡಿದ್ದರು ಅವರ ದಾರಿಯಲ್ಲಿ ಎಲ್ಲರು ಸಾಗೋಣ. ಅಭಿವೃದ್ಧಿ ನಿಂತ ನೀರಲ್ಲ. ನಿರಂತರವಾಗಿ ಜನರ ಆಶೋತ್ತರಗಳಿಗೆ ಸ್ಪಂದಿಸುವ ಕೆಲಸ ಮಾಡೋಣ ಎಂದರು.

ಎಚ್.ಎಸ್. ಮಹದೇವಪ್ರಸಾದ್ ಅವರ ಹುಟ್ಟುಹಬ್ಬ ಅಂಗವಾಗಿ ಅವರ ಅಭಿಮಾನಿ ಬಳಗವು ಪ್ರತಿ ವರ್ಷದಂತೆ ಈ ವರ್ಷವೂ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಅಯೋಜನೆ ಮಾಡಿ ಜನಪರ ಕಾರ್ಯಕ್ರಮವನ್ನು ಮಾಡುತ್ತಿದೆ. ಕಾರ್ಯಕ್ರಮ ಅಯೋಜಿಸಿರುವ ಮಹದೇವಪ್ರಸಾದ್ ಅಭಿಮಾನಿ ಬಳಗದ ಕೆರೆಹಳ್ಳಿ ನವೀನ್ ಮತ್ತು ತಂಡಕ್ಕೆ ಈ ಮೂಲಕ ಕೃತಜ್ಞತೆ ಸಲ್ಲಿಸುತ್ತೇವೆ ಎಂದರು.

ಹರವೆ ವಿರಕ್ತ ಮಠದ ಶ್ರೀಸರ್ಪಭೂಷಣ ಸ್ವಾಮೀಜಿ ಮಾತನಾಡಿ, ದಿವಂಗತ ಮಾಜಿ ಸಚಿವರಾದ ಹೆಚ್.ಎಸ್.ಮಹದೇವಪ್ರಸಾದ್ ಅವರು ಅಭಿವೃದ್ಧಿ ಹರಿಕಾರರು. ನಾಡು ಕಂಡ ರಾಜಕಾರಣಿಗಳಲ್ಲಿ ಅಪರೂಪದ ರಾಜಕಾರಣಿಯಾಗಿದ್ದರು. ಅವರು ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುವ ಮೂಲಕ ತಮ್ಮದೇ ಛಾಪು ಮೂಡಿಸಿದ್ದಾರೆ ಎಂದರು

ಹೆಚ್.ಎಸ್.ಮಹದೇವಪ್ರಸಾದ್ ಅಭಿಮಾನಿ ಬಳಗದ ಅಧ್ಯಕ್ಷ ಕೆರೆಹಳ್ಳಿ ನವೀನ್ ಮಾತನಾಡಿ, ಮಹದೇವಪ್ರಸಾದ್ ಅವರು 25 ವರ್ಷಗಳ ಕಾಲ ಶಾಸಕರಾಗಿ 3 ಬಾರಿ ಸಚಿವರಾಗಿ ಜಿಲ್ಲೆಯಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ಜನಮಾನಸದಲ್ಲಿ ಉಳಿದಿದ್ದಾರೆ. ಜಿಲ್ಲೆಯ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದರು

ಕಳೆದ 13 ವರ್ಷಗಳಿಂದಲ್ಲೂ ನಿರಂತರವಾಗಿ ಮಹದೇವಪ್ರಸಾದ್ ಹುಟ್ಟುಹಬ್ಬದ ಪ್ರಯುಕ್ತ ಸಮಾಜಮುಖಿ ಸೇವಾ ಕಾರ್ಯಗಳನ್ನು ಮಾಡಲಾಗುತ್ತಿದೆ. ಕಣ್ಣಿನ ತಪಾಸಣಾ ಶಿಬಿರ, ಶಾಲಾ ಮಕ್ಕಳಿಗೆ ನೋಟ್ ಪುಸ್ತಕ ವಿತರಣೆ ಬಡಮಕ್ಕಳ ವಿದ್ಯಾಭ್ಯಾಸ ಕ್ಕೆ ಸ್ಪಂದಿಸಲಾಗುತ್ತದೆ ಮುಂದಿನ ದಿನಗಳಲ್ಲಿಇನ್ನು ಹೆಚ್ಚಿನ ರೀತಿ ಸೇವಾ ಕಾರ್ಯಗಳನ್ನು ಮಾಡಲಾಗುತ್ತದೆ ಎಂದರು.

ಉಚಿತ ಕಣ್ಣಿನ ತಪಾಸಣೆ ಶಿಬಿರ ಯಶಸ್ವಿ: ಮಾಜಿ ಸಚಿವ ದಿವಂಗತ ಹೆಚ್.ಎಸ್.ಮಹದೇವಪ್ರಸಾದ್ ಅವರ 68ನೇ ಜನ್ಮದಿನ ಪ್ರಯುಕ್ತ ಅಭಿಮಾನ ಬಳಗದ ವತಿಯಿಂದ ಉಚಿತ ಕಣ್ಣಿನ ತಪಾಸಣಾ ಶಿಬಿರ ಯಶಸ್ವಿ ಯಾಗಿ ನಡೆದು, 300ಮಂದಿ ತಪಾಸಣೆ ಮಾಡಿಸಿಕೊಂಡರು. 130 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆಯಾದರು.

ಕಾರ್ಯಕ್ರಮದಲ್ಲಿ ಕಾಡಾಧ್ಯಕ್ಷ ಪಿ.ಮರಿಸ್ವಾಮಿ, ಜಿ.ಪಂ. ಮಾಜಿ ಸದಸ್ಯ ಕೆ.ಪಿ.ಸದಾಶಿವಮೂರ್ತಿ, ಜಿಲ್ಲಾ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನಾಗರತ್ನ ಕೆಂಗಾಕಿ, ತಾ.ಪಂ.ಮಾಜಿ ಸದಸ್ಯ ಮುಕ್ಕಡಹಳ್ಳಿ ರವಿಕುಮಾರ್, ಉದಯ್ ಕುಮಾರ್, ಮಾಸ್ಟರ್ ಮಾದಪ್ಪ, ಸಿದ್ದರಾಮಯ್ಯ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಬೆಳ್ಳೇಗೌಡ, ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಮಧುಸೂದನ್, ನಾಗೇಶ್, ರಂಗಸ್ವಾಮಿ, ಬಸವರಾಜು, ಪಿಆಓ ವಿಜಯಕಾಂತ್, ಬಸವಣ್ಣ, ರಾಜಕುಮಾರ, ಕೆರೆಹಳ್ಳಿ ರೇವಣ್ಣ, ಮಲ್ಲಣ್ಣ, ಹಿರಿಬೇಗೂರು ಗುರುಸ್ವಾಮಿ, ಬೆಟ್ಟದಪುರದ ಗುರುಬಸಪ್ಪ, ಕೇತಹಳ್ಳಿ ಶಿವಪಾದಪ್ಪ ಮೊದಲಾದವರು ಇದ್ದರು.

# ಗುರು ಬೋಧಾಮೃತದಿಂದ ಸುಖ ಶಾಂತಿ ಪ್ರಾಪ್ತಿ: ಉಜ್ಜಯಿನಿ ಜಗದ್ಗುರುಗಳು



**ಕಲಬುರಗಿ:ಆ.6:** ಯೋಗಿಗೆ ಯೋಗದ ಚಿಂತೆ ಯೋಧನಿಗೆ ಯುದ್ಧದ ಚಿಂತೆ, ತಂದೆಗೆ ಮಗನ ಚಿಂತೆ, ಗುರುವಿಗೆ ಶಿಷ್ಯನ ಉದ್ಧಾರದ ಚಿಂತೆ ಇರುತ್ತದೆ. ಗುರು ಬೋಧಾಮೃತದಿಂದ ಸುಖ ಶಾಂತಿ ಪ್ರಾಪ್ತವಾಗುತ್ತದೆ ಎಂದು ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಚಾರ್ಯ ಭಗತ್ಪಾದರು ನುಡಿದರು.

ಅವರು ನಗರದ ಸೊಗಸನಕೇರಿಯ ಶ್ರೀ ಗುರುಶಾಂತಲಿಂಗೇಶ್ವರ ಕಲ್ಯಾಣಮಂಟಪದಲ್ಲಿ ಸಿದ್ಧಾಂತ ಶಿಖಾಮಣಿ ವಚನ ಸಾಹಿತ್ಯ ಸಮನ್ವಯಾತ್ಮಕ, ಆಧ್ಯಾತ್ಮಿಕ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವೀರಶೈವ ಧರ್ಮವು ಪ್ರಾಚೀನ ಹಾಗೂ ಉತ್ಕೃಷ್ಟ ಪರಂಪರೆ ಹೊಂದಿದೆ, ಶಿವಜ್ಞಾನ ಅರಿಯದೇ ಇದ್ದರೇ ಗುರುಕಾರುಣ್ಯ ಪಡೆಯದೇ ಇದ್ದರೇ ಜೀವನವು ವ್ಯರ್ಥವಾಗುತ್ತದೆ ಎಂದು ಶ್ರೀ ಜಗದ್ಗುರು ರೇಣುಕಾಚಾಯರ್ಾರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ ಎಂದು ನುಡಿದರು.

ಕಡಗಂಚಿಯ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು, ಕಮಲಾಪುರದ ಗ್ರಾಮೀಣ ಮತ ಕ್ಷೇತ್ರದ ಶಾಸಕರಾದ ಬಸವರಾಜ ಮತ್ತಿಮೂಡ ಅವರ ಧರ್ಮಪತ್ನಿ ಜಯಶ್ರೀ ಮತ್ತಿಮೂಡ ಅವರು ಮಾತನಾಡುತ್ತ ಹೊರಗಿನ ಕತ್ತಲೆಯನ್ನು ದೂರ ಮಾಡಲು ದೀಪದ ಅಗತ್ಯವಿದ್ದಂತೆ, ಒಳಗಿನ ಕತ್ತಲೆಯನ್ನು ಹೋಗಲಾಡಿಸಲು ಗುರುವಿನ ಜ್ಞಾನಾಮೃತ ಅಗತ್ಯವಾಗಿದೆ. ಮಹಾ ಗುರುಗಳ ಆಶೀರ್ವಾದದಿಂದ ಜೀವನವನ್ನು ಪಾವನಗೊಳಿಸಿಕೊಳ್ಳುವ ಅವಕಾಶ ದೊರೆತಿದೆ ಎಂದರು.

ಚಿಂಚನಸೂರಿನ ಸಿದ್ಧಮಲ್ಲ ಶಿವಾಚಾರ್ಯರು, ಪಾಳಾದ ಡಾ. ಗುರುಮೂರ್ತಿ ಶಿವಾಚಾರ್ಯರು, ಸುಲೇಪೇಟ, ಕಡಗಂಚಿಯ ಪಂಪಾತಿ ದೇವರುಗಳು ಉಪಸ್ಥಿತರಿದ್ದರು. ರೈತ ಸಂಘದ ರಾಜ್ಯಾಧ್ಯಕ್ಷರಾದ ದಯಾನಂದ ಪಾಟೀಲ, ಶಿವಾನಂದ ಮಠಪತಿ, ನಂದಿನಿ ಎಸ್. ಸನಬಾಳ ಜಿಲ್ಲಾಧ್ಯಕ್ಷರು ಪ್ರಾ.ಶಿ.ಸಂಘ, ಶಾರದಾಬಾಯಿ ಉಪಕಾಯರ್ಾದರ್ಶಿಗಳು, ಶಾಂತಕುಮಾರ ಮಡಿವಾಳ ನಾವದಗಿ, ರಾಮಲಿಂಗ ಹೊನ್ನಳ್ಳಿ, ಸುಂಟನೂರಿನ ನಾಗಲಿಂಗಯ್ಯ ಶಾಸ್ತ್ರಿಗಳು ಇದ್ದರು. ಪೀಠದ ಗುರುಕುಲ ಸಾಧಕರಿಂದ ವೇದಘೋಷ ಜರುಗಿತು. ಚೇತನ ಬೀದಿಮನಿ, ಮಹಾಂತಯ್ಯಸ್ವಾಮಿ ನಿಂಗದಳ್ಳಿ ಇವರಿಂದ ಸಂಗೀತ ಜರುಗಿತು. ಯುವ ಸಾಹಿತಿ ಶಿವಯ್ಯ ಮಠಪತಿ ನಿರೂಪಿಸಿದರು.

## ಸಾಹಿತ್ಯದಿಂದ ಮನುಷ್ಯನಿಗೆ ನೆಮ್ಮದಿ ಸಿಗುತ್ತದೆ ; ಮಾಳಮ್ಮ ಬುಗ್ಗಪ್ಪನೋರ

**ಕಲಬುರಗಿ ;** ಸಂಗೀತ, ನೃತ್ಯ, ನಾಟಕ, ಸಾಹಿತ್ಯದಿಂದ ಮನಸಿಗೆ ನೆಮ್ಮದಿ ಸಿಗಲು ಸಾಧ್ಯ ಎಂದು ಶ್ರೀಮತಿ ಮಾಳಮ್ಮ ಬುಗ್ಗಪ್ಪನೋರ ಹೇಳಿದರು.ನಗರದಲ್ಲಿರುವ ಪ್ರಶಾಂತ ನಗರದ ಜ್ಯೋತಿಲಿರ್ಂಗ ದೇವಸ್ಥಾನದಲ್ಲಿ ಬಾಬು ಜಗಜೀವನರಾಂ ಸ್ಮಾರಕ ಶಿಕ್ಷಣ ಸಂಸ್ಥೆ, ಸಂವಿಧಾನ ಶಿಲ್ಪಿ ಸಂಗೀತ ವಿದ್ಯಾಲಯ ಬಡೇಪೂರ, ವಿದ್ಯಾನಗರ ಕಾಲೋನಿ ಕಲಬುರಗಿ

ಹಮ್ಮಿಕೊಂಡಿದ್ದ “ಹೆಜ್ಜೆ ಗೆಜ್ಜೋತ್ಸವ” ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ಉದ್ಘಾಟಿಸಿ ಮಾತನಾಡಿ, ಸಂಗೀತ ಮನಸಿಗೆ ಔಷಧಿ ಇದ್ದಂತೆ, ಸಂಗೀತದಿಂದ ಬಹು ದೂರು ಉಳಿಯಬಾರದು, ಸಂಗೀತ ಬಿಟ್ಟರೆ ಖಿನ್ನತೆಗೆ ತುತ್ತಾಗಬೇಕಾಗುತ್ತದೆ ಎಂದು ತಿಳಿಸಿದರು. ಈಗಿನ ಮಕ್ಕಳು ಸಂಗೀತ, ನೃತ್ಯ, ನಾಟಕ, ಕಲೆಗಳು ರೂಢಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ವೇದಿಕೆ ಅಧ್ಯಕ್ಷರಾದ ಸಂಗೀತಾ.ಪಿ. ಮಾತನಾಡಿ ಜಾನಪದ ಕಲೆಗಳಿಗೆ ತನ್ನದೇ ಆದ ವೈಶಿಷ್ಟತೆ ಇದೆ, ಇಂತಹ ಕಲೆಗಳನ್ನು ಈಗಿನ ಯುವ ಕಲಾವಿಧರು ಉಳಿಸಬೇಕು.

ವ್ಯಕ್ತಿ ಆರ್ಥಿಕವಾಗಿ ಎಷ್ಟೆ ಬಲಿಷ್ಠನಾದರೂ ಮಾನಸಿಕ ನೆಮ್ಮದಿಗಾಗಿ ಸಾಂಸ್ಕೃತಿಕ ಚಟುವಟಿಕೆಗಳ ಇತ್ತಿಚಿನ ಕಾಲದಲ್ಲಿ ಅತ್ಯಗತ್ಯ. ಇದಕ್ಕೆ ಹಳ್ಳಿ ಹಳ್ಳಿಗಳಲ್ಲಿ ಅನರಕ್ಷಸ್ಥ ಕಲಾವಿದರು ಬಹಳ ಇದ್ದಾರೆ. ಅವರಿಗೆ ಸರಿಯಾದ ವೇದಿಕೆ ಸಿಗುತ್ತಿಲ್ಲ.

ನಮ್ಮ ಸಂಸ್ಥೆ ವತಿಯಿಂದ ಇನ್ನೂ ಹೆಚ್ಚು ಹೆಚ್ಚು ಗ್ರಾಮೀಣ ಪ್ರದೇಶದಲ್ಲಿ ಇಂತಹ ಕಾರ್ಯಕ್ರಮಗಳು ಹಮ್ಮಿಕೊಳ್ಳುತ್ತೇವೆ. ಹಾಗೂ ಇದಕ್ಕೆ ಸರ್ಕಾರ ಸಹಾಯ, ಸಹಕಾರ,



ನೀಡಬೇಕು. ಮತ್ತು ಇದಕ್ಕೆ ವೇದಿಕೆ ಆಗಬಲ್ಲ ವೈವಿಧ್ಯಮಯ ಕಾರ್ಯಕ್ರಮಗಳನ್ನು ಇನ್ನೂ ಹೆಚ್ಚುಹೆಚ್ಚು ನಡೆಸಬೇಕು, ಇದರಲ್ಲಿ ಆಸಕ್ತಿ ಬೆಳೆಸುವಂತೆ ಮಾಡಬೇಕೆಂದರು, ವಿವಿಧ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು. ನಾಗರಾಜ ವಂದಿಸಿದರು.

# ಜಗತ್ತಿನ ಜ್ಞಾನದ ಬೆಳಕು ಡಾ. ಅಂಬೇಡ್ಕರ್: ಪ್ರೊ. ಶಶಿಕಾಂತ್ ಎಸ್. ಉಡಿಕೇರಿ




ಕಲಬುರಗಿ: ಜಗತ್ತಿನ ಜ್ಞಾನದ ಬೆಳಕು ಡಾ. ಬಿ.ಆರ್. ಅಂಬೇಡ್ಕರ್ ಆಗಿದ್ದಾರೆ. ಅವರ ಜ್ಞಾನದಿಂದ ಯಾರು ಜ್ಞಾನದ ಬೆಳಕನ್ನು ಪಡೆದಿದ್ದಾರೆ ಎಂಬ ಸಂಗತಿಗಳನ್ನು ಅರಿಯಲು 'ಕರ್ನಾಟಕದಲ್ಲಿ ಅಂಬೇಡ್ಕರ್ ಹೆಜ್ಜೆಗಳು' ಉಪನ್ಯಾಸ ಸಾಕ್ಷಿಯಾಗಿದೆ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ್ ಎಸ್. ಉಡಿಕೇರಿ ಆಶಯ ವ್ಯಕ್ತಪಡಿಸಿದರು.

ಗುಲಬರ್ಗಾ ವಿಶ್ವವಿದ್ಯಾಲಯದ ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆ ಕನ್ನಡ ಅಧ್ಯಯನ ಸಂಸ್ಥೆಯ ಹರಿಹರ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ "ಕರ್ನಾಟಕದಲ್ಲಿ ಡಾ. ಬಿ. ಆರ್. ಅಂಬೇಡ್ಕರರ ಹೆಜ್ಜೆಗಳು" ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿ ವಿಶ್ವಜ್ಞಾನಿ ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಕುರಿತು ಇಂತಹ ವಿಶಿಷ್ಟ ಕಾರ್ಯಕ್ರವನ್ನು ಆಯೋಜಿಸಿದ ಪ್ರೊ. ಎಚ್.ಟಿ. ಪೋತೆ ಅವರಿಗೆ ಅಭಿನಂದಿಸಬೇಕು ಎಂದರು.ಸಹಕಾರ ಇಲಾಖೆಯ ನಿವೃತ್ತ ಉಪನಿರ್ದೇಶಕ ಹಾಗೂ ವಿಜಯಪುರ ಹಲಸಂಗಿ ಮಧುರಚೆನ್ನ ಗೆಳೆಯರ ಬಳಗದ ಬಿ. ಆರ್. ಬನಸೋಡೆ ವಿಶೇಷ ಉಪನ್ಯಾಸ ನೀಡುತ್ತಾ ಡಾ. ಬಿ. ಆರ್. ಅಂಬೇಡ್ಕರ್ ಅವರು ಸುಮಾರು 1936 ರಲ್ಲಿ ವಿಜಯಪುರಕ್ಕೆ ಆಗಮಿಸಿದ ಸಂದರ್ಭದಲ್ಲಿ ನಮ್ಮ ತಾತ ಶಿವಪ್ಪ ಕಾಂಬಳೆ ನದಿ ದಾಟುವಾಗ ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಹೆಗಲ ಮೇಲೆ ಹೊತ್ತು ಕೊಂಡು ಹೋಗಿದ್ದ ಸಂಗತಿ ಮತ್ತು ವಿಜಯಪುರದಲ್ಲಿ ಅಂಬೇಡ್ಕರ್ ಅವರ ಒಡನಾಟದ ಬಗ್ಗೆ ಸ್ಮರಿಸಿಕೊಂಡರು.

ಡಾ. ಬಿ. ಆರ್. ಅಂಬೇಡ್ಕರ್ ಅವರು ಕರ್ನಾಟಕಕ್ಕೆ ಬಂದಿದ್ದರ ಬಗ್ಗೆ ಅವರ ಬರಹಗಳನ್ನು ಅಧ್ಯಯನ ನಡೆಸಿ ನಂತರ ಅಂಬೇಡ್ಕರ್ ಕುರಿತು ಪುಸ್ತಕ ಬರೆದು ಪ್ರಕಟಿಸಿದ್ದೇನೆ. ನಾನು ಸಂಗ್ರಹಿಸಿದ ಎಲ್ಲಾ ಅಧಿಕೃತ ದಾಖಲೆಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಿದೆ. ಸರ್ಕಾರಿ ನೌಕರನಾದರು ಬದುಕಿನ ಉದ್ದಕ್ಕೂ ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಓದುತ್ತ ಬಂದಿರುವೆ. ಪ್ರಸ್ತುತ ನಮಗೆಲ್ಲ ಡಾ. ಬಿ. ಆರ್. ಅಂಬೇಡ್ಕರ್ ಮಾದರಿಯಾಗಿದ್ದಾರೆ.ಅಂಬೇಡ್ಕರ್ ಅವರು ಕರ್ನಾಟಕದ ಬೆಳಗಾವಿಯ ನಿಪ್ಪಾಣಿಗೆ ಮೊದಲು ಬಂದಿದ್ದರು. ನಂತರ 1920ರಲ್ಲಿ ಧಾರವಾಡಕ್ಕೆ ಬರುತ್ತಾರೆ. ಧಾರವಾಡದಲ್ಲಿ ಹಾಸ್ಟೆಲ್ ತೆರೆದು ಅದಕ್ಕೆ ಬುದ್ಧ ಚೆರಿತೆ ಎಂದು ಹೆಸರಿಡುತ್ತಾರೆ. ಮುಂದೆ 1939ರಲ್ಲಿ ವಕೀಲ ಅಂಗಡಿಯವರ ಕೇಸ್ ವಾದಿಸಲು ವಿಜಯಪುರಕ್ಕೆ ಬರುತ್ತಾರೆ. ನಂತರ ಕಾಕಾ ಕಾರ್ಕ್ನಿಸ್ ಅವರನ್ನು ಭೇಟಿಯಾಗುತ್ತಾರೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ರಾಷ್ಟ್ರೀಯ ನಾಯಕರಲ್ಲ ಅಂತರಾಷ್ಟ್ರೀಯ ಮಟ್ಟದ ಪ್ರಮುಖ ನಾಯಕರು ಎಂಬ ಮಹತ್ವದ ಸಂಗತಿಗಳನ್ನು ಹಂಚಿಕೊಂಡರು.

ಸಿಂಡಿಕೇಟ್ ಸದಸ್ಯ ಎಸ್.ಪಿ. ಸುಳ್ಳದ್ ಅತಿಥಿಯಾಗಿ ಮಾತನಾಡಿ ಪ್ರೊ. ಎಚ್.ಟಿ. ಪೋತೆಯವರು ಆಯೋಜನೆ ಮಾಡುತ್ತಿರುವ ಶಿಬಿರಗಳು, ವಿಚಾರ ಸಂಕಿರಣಗಳು, ವಿಶೇಷ ಉಪನ್ಯಾಸಗಳಿಂದ ವಿದ್ಯಾರ್ಥಿಗಳಿಗೆ ಶಿಕ್ಷಣ, ಸಾಹಿತ್ಯ, ವೈಚಾರಿಕ ಸಾಹಿತ್ಯ ಮತ್ತು ಜಾಗತಿಕ ಮಟ್ಟದ ಸಮಕಾಲಿನ ನೈಜ ಸಂಗತಿಗಳನ್ನು ತಿಳಿದುಕೊಳ್ಳಲು ಸಾಧ್ಯವಾಗುತ್ತಿದೆ. ಇದರಿಂದ ಕನ್ನಡ ಅಧ್ಯಯನ ಸಂಸ್ಥೆ ಜೀವಂತಿಕೆಯನ್ನು ಕಾಪಾಡಿಕೊಂಡು ಬಂದಿದೆ ಎಂದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕಲಾ ನಿಕಾಯದ ಡೀನ್, ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ. ಎಚ್.ಟಿ. ಪೋತೆಯವರು ಮಾತನಾಡಿ ಬಾಬಾಸಾಹೇಬರು ಬೆಳಗಾವಿಗೆ ಅನೇಕ ಬಾರಿ ಬಂದಿದ್ದರು. ಅವರು ಯಾವಾಗಲೂ ಸಮಾಜ ಮತ್ತು ಸಾಮಾಜಿಕ ಕಾರ್ಯಕ್ರಮಗಳಿಂದಾಗಿಯೇ ಬರುತ್ತಿದ್ದರು. ಚಿಕ್ಕೋಡಿ ನ್ಯಾಯಾಲಯಕ್ಕೆ ಕೂಡ ಭೇಟಿ ನೀಡಿದ್ದಾರೆ.

ಅದೇ ಸಂದರ್ಭದಲ್ಲಿ ನಿಪ್ಪಾಣಿಗೆ ಬಾಬಾ ಸಾಹೇಬರು ಬಂದಿದ್ದರು ಎಂಬುದನ್ನು ಅರಿತ ಚನ್ನಬಸಪ್ಪ ಕರಾಳೆಯವರು ಕುದುರೆ ತೆಗೆದುಕೊಂಡು ಹೋಗುತ್ತಾರೆ. ಅದನ್ನು ಕಂಡ ಬಾಬಾಸಾಹೇಬರು ಕರಾಳೇ ಅವರನ್ನು ಕುದುರೆ ಮೇಲೆ ಕೂಣಟಿಜಜಜಿುಟಿಜಜಡಬಹುದೆ ಎಂದು ಕೇಳುತ್ತಾರೆ. ಇವತ್ತು ನಾವುಗಳು ನೋಡುತ್ತಿರುವ ಬಾಬಾಸಾಹೇಬರು ಕುದುರೆ ಮೇಲೆ ಕುಳಿತಿರುವ ಫೋಟೋ ಅದೇ ಸನ್ನಿವೇಶದ ಚಿತ್ರ. ನಮ್ಮ ನೆಲದ ನಿಪ್ಪಾಣಿಗೆ ಕೋರ್ಟ ವಿಷಯಕ್ಕಾಗಿ ಮಹ್ಮದ್ ಪಟೇಲರ್ ಮನೆಗೆ ಬಂದಾಗ ಊಟಕ್ಕೆ ನೀಡಿದ ಮಹಿಳೆಯ ಮಗಳಿಗೆ ಮುನ್ನಿ ಎಂದು ಬಾಬಾಸಾಹೇಬರು ಹೆಸರಿಡುತ್ತಾರೆ.

ಅಂಬೇಡ್ಕರ ಅವರೊಂದಿಗೆ ಹೀಗೆ ಅನೇಕ ರೀತಿಯ ಭಾವನಾತ್ಮಕ ಐತಿಹಾಸಿಕ ಸಂಬಂಧಗಳನ್ನು ಕರ್ನಾಟಕ ಹೊಂದಿದೆ. ಅಲ್ಲದೆ ಅಂಬೇಡ್ಕರ್ ಅವರು ಕರ್ನಾಟಕಕ್ಕೆ ಎಲ್ಲೆಲ್ಲಿಗೆ, ಯಾವಾಗ ಬಂದಿದ್ದಾರೆ ಅಲ್ಲಿ ಇತಿಹಾಸ ನಿರ್ಮಾಣವಾಗಿದೆ. ಶಿಕ್ಷಣಕ್ಕೆ ಮಹತ್ವ ಬಂದಿದೆ. ಸಾಮಾನ್ಯ ವ್ಯಕ್ತಿಗಿಂತ ಒಬ್ಬ ಶ್ರೇಷ್ಠ ವ್ಯಕ್ತಿ ಬಂದಿದ್ದ ಸ್ಥಳಗಳಲ್ಲಿ ಸಾಮಾಜಿಕ ಬದಲಾವಣೆ ಆಗಿದೆ. ಅಧ್ಯಯನದ ಕೊರತೆಯಿಂದ ಇಂದಿನ ಯುವ ಸಮುದಾಯ ಅಂಬೇಡ್ಕರ್ ಅವರನ್ನು ಅರಿಯುವಲ್ಲಿ ಸೋತಿದ್ದಾರೆ ಅಂಬೇಡ್ಕರ್ ಮತ್ತು ಶರಣ, ಸಂತರ ಚಿಂತನೆಗಳನ್ನು ಅರಿತುಕೊಂಡಾಗ ಮಾತ್ರ ಭವಿಷ್ಯ ಕಟ್ಟಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂಬ ಅನೇಕ ಸಂಗತಿಗಳನ್ನು ವಿವರಿಸಿದರು.

ಇದೇ ವೇಳೆ ರಾಷ್ಟ್ರಪತಿಯಿಂದ ಪ್ರಶಸ್ತಿ ಪಡೆದ ವಿಶೇಷ ಸನ್ಮಾನಕ್ಕೆ ಒಳಗಾದ ಡಾ. ರೆಹಮಾನ್ ಪಟೇಲ್ ಅವರಿಗೆ ಸನ್ಮಾನಿಸಲಾಯಿತು. ವಿದ್ಯಾವಿಷಯಕ ಪರಿಷತ್ ಸದಸ್ಯ ಡಾ. ದಶರಥ ನಾಯಕ, ಸಂದರ್ಶನ ಪ್ರಾಧ್ಯಾಪಕ ಡಾ. ಸೂರ್ಯಕಾಂತ ಸುಜ್ಯಾತ ಹಾಗೂ ಅತಿಥಿ ಉಪನ್ಯಾಸಕ ಬಳಗ ಮತ್ತು ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು. ಸಂಗೀತ ವಿಭಾಗದ ಉಪನ್ಯಾಸಕ ಸಿದ್ಧಾರ್ಥ ಚಿಮ್ಮಾ ಇದ್ಲಾಯಿ ಬುದ್ಧ ವಂದನೆ ಗೀತೆ ಹಾಡಿದರು. ಡಾ. ಶಂಭುನಾಥ ನಡಗೇರಿ ಸ್ವಾಗತಿಸಿದರು. ಡಾ. ಸಂದೀಪ ಹೋಳ್ಕರ್ ವಂದಿಸಿದರು. ಡಾ. ಕಿರಣ್ ವಲ್ಲೇಪುರೆ ಕಾರ್ಯಕ್ರಮ ನಿರ್ವಹಿಸಿದರು.

ಮಿಸಲಾತಿ ಕುರಿತು ಅಪವ್ಯಾಖ್ಯಾನಗಳು ಇವೆ. ಅದೇ ಸಂದರ್ಭದಲ್ಲಿ ಸಾರ್ವಕರ್ 'ಅಸ್ಪೃಶ್ಯತೆ ತೊಡೆದು ಹಾಕಿದರೆ ಮೀಸಲಾತಿ ಅವಶ್ಯಕತೆ ಇಲ್ಲ' ಎಂದಿದ್ದಾರೆ. ಪ್ರಸ್ತುತ ಅದರ ವಾಸ್ತವತೆ ಅರಿಯುವುದು ಇಂದು ಜರೂರಿದೆ. ಆದರೆ ಈಗಿನ ಆರ್.ಎಸ್.ಎಸ್. ನವರು ಸಾರ್ವಕರ್ ಹೆಸರು ಬಳಸಿಕೊಂಡು ಅವರ ಮಾತುಗಳನ್ನು ಮರೆಮಾಚುತ್ತಾರೆ. ಇದನ್ನು ನಾವು ಅರ್ಥ ಮಾಡಿಕೊಳ್ಳಬೇಕಾಗಿದೆ.

ಬಿ. ಆರ್. ಬನಸೋಡೆ

ಸಹಕಾರ ಇಲಾಖೆಯ ನಿವೃತ್ತ ಉಪನಿರ್ದೇಶಕ

# ಇಂದಿನಿಂದ ಮೂರು ದಿನಗಳ ಕಾನೂನು ಕಾರ್ಯಾಗಾರಕಿರಿಯ ವಕೀಲರು, ಕಾನೂನು ವಿದ್ಯಾರ್ಥಿಗಳು ಸದುಪಯೋಗ ಪಡೆಯಲು ಮನವಿ



**ಜಮಖಂಡಿ, ಆ.6**: ಕರ್ನಾಟಕ ರಾಜ್ಯ ವಕೀಲರ ಪರಿಷತ್ತು ಹಾಗೂ ಜಮಖಂಡಿ ತಾಲೂಕು ವಕೀಲರ ಸಂಘದ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 7ರಿಂದ 9ರವರೆಗೆ ನಗರದ ಎಸ್‌ಆರ್‌ಎ ಕ್ಲಬ್‌ನ ಸಭಾಭವನದಲ್ಲಿ ಮೂರು ದಿನಗಳ ಕಾನೂನು ಕಾರ್ಯಾಗಾರ ನಡೆಯಲಿದ್ದು, ಕಿರಿಯ ವಕೀಲರು, ನ್ಯಾಯಾಂಗ ಸೇವಾ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ಅಭ್ಯರ್ಥಿಗಳು ಹಾಗೂ ಕಾನೂನು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬೇಕು ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ಎ.ಪಿ. ಕುಲಕರ್ಣಿ ಮನವಿ ಮಾಡಿದರು.

ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗಸ್ಟ್ 7ರಂದು ಬೆಳಿಗ್ಗೆ 10.30ಕ್ಕೆ ಒಂದನೇ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಹಮದ್ ಇಂತಿಯಾಜ್ ಅಹಮದ್ ಕಾರ್ಯಾಗಾರವನ್ನು ಉದ್ಘಾಟಿಸಲಿದ್ದಾರೆ. ರಾಜ್ಯ ವಕೀಲರ ಪರಿಷತ್ತಿನ ಸದಸ್ಯರಾದ ಐ.ಎಂ. ಪಾಟೀಲ, ಜಿ.ವಿ. ಕೋರಿಮಠ, ನಾರಾಯಣಸ್ವಾಮಿ ಜಿ., ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ವೈದ್ಯ ಶ್ರೀಕಾಂತ, ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶ ಶ್ರೀಕಾಂತ ರವೀಂದ್ರ, ಪ್ರಧಾನ ಸಿವಿಲ್ ನ್ಯಾಯಾಧೀಶ ಬಸವರಾಜ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಶ್ರೀದೇವಿ, ವಕೀಲರ ಸಂಘದ ಉಪಾಧ್ಯಕ್ಷೆ ವಿ.ಎ. ಭಟ್ ಹಾಗೂ ಪ್ರಧಾನ ಕಾರ್ಯದರ್ಶಿ ವೈ.ಕೆ. ಕಡಪಟ್ಟಿ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮೂರು ದಿನಗಳ ಕಾರ್ಯಾಗಾರದಲ್ಲಿ ವಿವಿಧ ಮಹತ್ವದ ಕಾನೂನು ವಿಷಯಗಳ ಕುರಿತು ಹಿರಿಯ ನ್ಯಾಯವಾದಿಗಳು ಹಾಗೂ ಕಾನೂನು ತಜ್ಞರು ಉಪನ್ಯಾಸ ನೀಡಲಿದ್ದಾರೆ. ಮೊದಲ ದಿನದ ಅಧಿವೇಶನದಲ್ಲಿ ಬೆಳಗಾವಿಯ ಹಿರಿಯ ನ್ಯಾಯವಾದಿ ದಿನೇಶ್ ಪಾಟೀಲ ಅವರು ದಿವಾಣಿ ಪ್ರಕ್ರಿಯಾ ಸಂಹಿತೆ, ಮಧ್ಯಸ್ಥಿಕೆ ಮತ್ತು ಸಂಧಾನ ಕಾಯ್ದೆ ಹಾಗೂ ಭೂ ಕಂದಾಯ ಕಾಯ್ದೆ ಕುರಿತು ಉಪನ್ಯಾಸ ನೀಡಲಿದ್ದಾರೆ. ಒಡಿಶಾದ ನಿವೃತ್ತ ಮುಖ್ಯ ನ್ಯಾಯಮೂರ್ತಿ ಕೃಷ್ಣಾ ದೀಕ್ಷಿತ್ ಅವರು 'ನ್ಯಾಯಾಂಗದಲ್ಲಿ ವಕೀಲರ ಪಾತ್ರ' ವಿಷಯ ಕುರಿತು ಮಾತನಾಡಲಿದ್ದಾರೆ.

ಆಗಸ್ಟ್ 8ರಂದು ಸಿಐಡಿ ಸರ್ಕಾರಿ ಅಭಿಯೋಜಕ ಹಾಗೂ ಕಾನೂನು ಸಲಹೆಗಾರ ಮಹೇಶ್ ವೈದ್ಯ ಅವರು ವಿದ್ಯುನ್ಮಾನ ಸಾಕ್ಷ್ಯ, ಬೆಂಗಳೂರಿನ ಹಿರಿಯ ವಕೀಲ ರಾಜಶೇಖರ ಜಿ. ಅವರು ಕರ್ನಾಟಕ ಬಾಡಿಗೆ ಅಧಿನಿಯಮ, ಹುಬ್ಬಳ್ಳಿಯ ಹಿರಿಯ ವಕೀಲ ಎಸ್.ಎಸ್. ಖತೀಬ್ ಅವರು ವರ್ಗಾವಣೆ ಲಿಖಿತ ಪತ್ರಗಳ ಅಧಿನಿಯಮ ಕುರಿತು ಉಪನ್ಯಾಸ ನೀಡಲಿದ್ದಾರೆ.

ಆಗಸ್ಟ್ 9ರಂದು ಧಾರವಾಡದ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಸ್.ಎಚ್. ಮಿತ್ತಲಕೋಡ ಅವರು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಹಾಗೂ ದಂಡ ಪ್ರಕ್ರಿಯಾ ಸಂಹಿತೆ, ಹಿರಿಯ ನ್ಯಾಯವಾದಿ ಕೆ.ಬಿ. ನಾವಲಗಿಮಠ ಅವರು ಭಾರತೀಯ ಸಾಕ್ಷ್ಯ ಅಧಿನಿಯಮ ಕುರಿತು ಉಪನ್ಯಾಸ ನೀಡಲಿದ್ದು, ಬಳಿಕ ಸಮಾರೋಪ ಸಮಾರಂಭ ನಡೆಯಲಿದೆ.

ಜಿಲ್ಲೆಯ ಎಲ್ಲ ವಕೀಲರ ಸಂಘಗಳ ಪದಾಧಿಕಾರಿಗಳು, ಕಿರಿಯ ವಕೀಲರು ಹಾಗೂ ಕಾನೂನು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಾಗಾರವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಂಟಿ ಕಾರ್ಯದರ್ಶಿ ಹಾಗೂ ಗ್ರಂಥಪಾಲಕ ಎಸ್.ಎ. ಅಂಬ್ಲಿ, ನ್ಯಾಯವಾದಿಗಳಾದ ಆರ್.ಆರ್. ಕರೋಶಿ, ಆರ್.ಎಂ. ಝುಂಡೆ, ಎಸ್.ಕೆ. ದಳವಾಯಿ, ಎನ್.ಎ. ಅತ್ತಾರ, ಜೆ.ಆರ್. ಮಾಳಿ, ವ್ಹಿ.ಜಿ. ಅಳ್ಳಿಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮೂರು ದಿನಗಳ ಕಾರ್ಯಾಗಾರದ ಪ್ರಮುಖ ವಿಷಯಗಳು

–ಆ.7: ದಿವಾಣಿ ಪ್ರಕ್ರಿಯಾ ಸಂಹಿತೆ, ಮಧ್ಯಸ್ಥಿಕೆ ಮತ್ತು ಸಂಧಾನ ಕಾಯ್ದೆ, ಭೂ ಕಂದಾಯ ಕಾಯ್ದೆ, ನ್ಯಾಯಾಂಗದಲ್ಲಿ ವಕೀಲರ ಪಾತ್ರ.

–ಆ.8: ವಿದ್ಯುನ್ಮಾನ ಸಾಕ್ಷ್ಯ, ಕರ್ನಾಟಕ ಬಾಡಿಗೆ ಅಧಿನಿಯಮ, ವರ್ಗಾವಣೆ ಲಿಖಿತ ಪತ್ರಗಳ ಅಧಿನಿಯಮ.

–ಆ.9: ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, ದಂಡ ಪ್ರಕ್ರಿಯಾ ಸಂಹಿತೆ, ಭಾರತೀಯ ಸಾಕ್ಷ್ಯ ಅಧಿನಿಯಮ ಹಾಗೂ ಸಮಾರೋಪ ಸಮಾರಂಭ.

# ಬಸ್ ನಿಲುಗಡೆಗೆ ಆಗ್ರಹಿಸಿ ಪ್ರತಿಭಟನೆ

**ಗುಳೇದಗುಡ್ಡ,ಆ.6:** ಸಮೀಪದ ಹಂಗರಗಿ-ಕಟಗೇರಿ ಗ್ರಾಮದ ಕ್ರಾಸ್‌ನಲ್ಲಿ ಬಸ್ ನಿಲುಗಡೆಗೆ ಆಗ್ರಹಿಸಿ, ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳು ರಸ್ತೆ ತಡೆದು ಪ್ರತಿಭಟನೆ ನಡೆಸಿ, ಶಾಲಾ ಕಾಲೇಜುಗಳ ಸಮಯಕ್ಕೆ ಬಸ್ ನಿಲುಗಡೆ ಮಾಡಬೇಕೆಂದು ವಿದ್ಯಾರ್ಥಿಗಳು ಆಗ್ರಹಿಸಿದ್ದಾರೆ.

ಕಟಗೇರಿ ಹಂಗರಗಿ ಕ್ರಾಸ್‌ನ ಮೂಲಕ ನಿತ್ಯವು ನೂರಾರು ವಿದ್ಯಾರ್ಥಿಗಳು ಬಾಗಲಕೋಟೆಗೆ ಶಾಲಾ ಕಾಲೇಜುಗಳಿಗೆ ತೆರಳುತ್ತಾರೆ. ಆದರೆ ಕಳೇದ ಹಲವು ದಿನಗಳಿಂದ ಈ ಕ್ರಾಸ್‌ನಲ್ಲಿ ಸರಿಯಾಗಿ ಬಸ್ ನಿಲ್ಲಿಸದಿರುವದರಿಂದ ನಮಗೆ ಶಾಲಾ ಕಾಲೇಜುಗಳಿಗೆ ಹೋಗಲು ತೊಂದರೆಯಾಗುತ್ತಿದೆ. ಹಲವು ಬಾರಿ ಮನವಿ ಸಲ್ಲಿಸಿದರು ಯಾವುದೇ ಪ್ರಯೋಜನವಾಗುತ್ತಿಲ್ಲ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

ಈ ಕ್ರಾಸನಲ್ಲಿ ಹಂಗರಗಿ, ಕಟಗೇರಿ, ಕೊಂಕಣಕೊಪ್ಪ, ಜಮ್ಮನಕಟ್ಟಿ, ಲಕ್ಕಸಕೊಪ್ಪ, ಹುಲಸಗೇರಿ, ಖಾಜಿಬೂದಿಹಾಳ ಗ್ರಾಮಗಳಿಂದ ನಿತ್ಯವು ನೂರಾರು ವಿದ್ಯಾರ್ಥಿಗಳು ಬಾಗಲಕೋಟೆ, ಬಾದಾಮಿಗೆ ತೆರಳುತ್ತಾರೆ.

ಆದರೆ ಇಲ್ಲಿ ಬಸ್ ನಿಲುಗಡೆಯಾಗದಿರುವದರಿಂದ ಶಾಲಾ ಕಾಲೇಜುಗಳಿಗೆ ತೆರಳಲು ಪರದಾಡುವಂತಾಗಿದೆ. ನಮ್ಮ ಶಿಕ್ಷಣಕ್ಕೆ ಪೆಟ್ಟು ನೀಡಿದಂತಾಗಿದೆ ಎಂದು ವಿದ್ಯಾರ್ಥಿಗಳು ತಮ್ಮ ಬೇಸರ ವ್ಯಕ್ತಪಡಿಸಿದರು.

ಹಂಗರಗಿ ಗ್ರಾಮಕ್ಕೆ ಶಾಲಾ ಕಾಲೇಜುಗಳ ಸಮಯಕ್ಕೆ ಬಸ್ ಓಡಿಸುವುಸುವುದು, ಹೀರೇಬೂದಿಹಾಳ, ಖಾಜಿಬೂದಿಹಾಳ, ಲಕ್ಕಸಕೊಪ್ಪ, ಜಮ್ಮನಕಟ್ಟಿ, ಹುಲಸಗೇರಿ




ಗ್ರಾಮಗಳಿಗೆ ಬಸ್ ಸಂಪರ್ಕ ಕಲ್ಪಿಸುವುದು, ಹೈದರಾಬಾದ್ ಪುಣೆ, ಇಚಲಕರಂಜಿ, ಮಿರಜ್ ಬಸ್‌ಗಳಿಗೆ ವಿದ್ಯಾರ್ಥಿಗಳ ಪಾಸ್ ನಡೆಸುವುದು, ಬಾಗಲಕೋಟೆ, ಹಂಗರಗಿ ಗುಳೇದಗುಡ್ಡಕ್ಕೆ ಒಂದು ಸರತಿ ಸಂಜೆ ಬಸ್ ಓಡಿಸುವುದು ಸೇರಿದಂತೆ ನಾನಾ ಬೇಡಿಕೆಗಳನ್ನು ವಿದ್ಯಾರ್ಥಿಗಳು ಅಧಿಕಾರಿಗಳಿಗೆ ಆಗ್ರಹಿಸಿದರು.

# ಸುರೇಶ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ

**ಕಲಬುರಗಿ:**ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯ ಅಡಿಯಲ್ಲಿ ಕಲಬುರಗಿಯ ಯುವ ಚಿತ್ರಕಲಾವಿದ ಸುರೇಶ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು 2026 ರ ಅಗಷ್ಟ 8 ರಿಂದ 12 ರವರೆಗೆ ನಗರದ ರಾಮಮಂದಿರ ಹಿಂದುಗಡೆ ಇರುವ ಬಿಸಿಲು ಆರ್ಟ್ ಗ್ಯಾಲರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಚಿತ್ರಕಲಾ ಪ್ರದರ್ಶನವನ್ನು ದಿನಾಂಕ ಅಗಷ್ಟ 8 ರಂದು ಸಂಜೆ 5:00 ಗಂಟೆಗೆ ಕಲಬುರಗಿ ದಕ್ಷಿಣ ಮತಕ್ಷೇತ್ರದ ಮಾಜಿ ಶಾಸಕರಾದ ಶ್ರೀ ದತ್ತಾತ್ರೇಯ ಸಿ. ಪಾಟೀಲ್ ಅವರು ಉದ್ಘಾಟಿಸಲಿದ್ದಾರೆ. ಸುರೇಶ ಅವರು ರಚಿಸಿದ ಕಲಾಕೃತಿಗಳನ್ನು ಚಿತ್ರಕಲಾವಿದ ಶ್ರೀ ಸುರ್ಯಕಾಂತ ನಂದೂರ ರವರು ಪರಿಚಯಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಹಿರಿಯ ಚಿತ್ರ-ಶಿಲ್ಪಕಲಾವಿದ ಶ್ರೀ ಬಾಬುರಾವ್ ಎಚ್., ಅತಿಥಿಯಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕಿ ಶ್ರೀಮತಿ ಜಗದೀಶ್ವರಿ ಅ. ನಾಸಿ ಅವರು ಪಾಲ್ಗೊಳ್ಳಲಿದ್ದು, ಹಿರಿಯ ಚಿತ್ರಕಲಾವಿದ ಮತ್ತು ಬಿಸಿಲು ಆರ್ಟ್ ಗ್ಯಾಲರಿಯ ಮುಖ್ಯಸ್ಥ ಶ್ರೀ ವಿ. ಬಿ. ಬಿರಾದಾರ ಅಧ್ಯಕ್ಷತೆ ವಹಿಸಲಿದ್ದಾರೆ.ಸುರೇಶ ಅವರು ವಿವಿಧ ಮಾಧ್ಯಮದಲ್ಲಿ ರಚಿಸಿದ ಸುಮಾರು 15ಕ್ಕೂ ಹೆಚ್ಚು ಚಿತ್ರಕಲಾಕೃತಿಗಳು ಪ್ರದರ್ಶನಗೊಳ್ಳಲಿವೆ. ಬೆಂಗಳೂರು, ಧಾರವಾಡ, ಕಲಬುರಗಿ ಸೇರಿದಂತೆ 10ಕ್ಕೂ ಹೆಚ್ಚು ಚಿತ್ರಕಲಾ ಪ್ರದರ್ಶನಗಳಲ್ಲಿ ಭಾಗವಹಿಸಿದ್ದಾರೆ. ಚಿತ್ರಕಲೆಯಲ್ಲಿ ವಿಶೇಷ ಪರಿಣಿತಿ ಡಿಪ್ಲೋಮಾ ಪಡೆದಿರುವ ಸುರೇಶ ರವರು ಕಲಬುರಗಿ ಕಲಾ ಮುಹೋತ್ಸವ, ಗುಲಬರ್ಗಾ ವಿಶ್ವವಿದ್ಯಾಲಯದ ರಾಜ್ಯೋತ್ಸವ ಪ್ರಶಸ್ತಿ, ಗದಗಿನ ವಿಜಯ ಕಲಾ ಮಂದಿರದ ಅಮೃತ ಮುಹೋತ್ಸವ ಪ್ರಶಸ್ತಿ ಹೀಗೆ ಹಲವಾರು ಪ್ರಶಸ್ತಿಗಳನ್ನು ಪಡೆದುಕೊಂಡಿದ್ದಾರೆ.



**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**